# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 80 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 10–10–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 80 | RNI No: KARKAN/2023/88462 | Chitradurga | Date: 10-10-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಬಿಜೆಪಿ ಕಾರ್ಯಕರ್ತರ ಪಾರ್ಟಿ: ಸಂಸದ ಕಾರಜೋಳ 2
ಮನುಷ್ಯ ಶಿವಸ್ವರೂಪಿಯಾದಾಗ ಯಾವ ಅನಿಷ್ಟಗಳು ಬರುವುದಿಲ್ಲ: ಸಂಸದ 3
ಜಯದೇವ ಜಗದ್ಗುರುಗಳ ಸಂಸ್ಮರಣ ಜಯದೇವ ದಿಗ್ವಿಜಯ ಪುಸ್ತಕ ಬಿಡುಗಡೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮೂರು ದಿನಗಳ ತರಬೇತಿ ಕಾರ್ಯಾಗಾರ

» ಚಿತ್ರದುರ್ಗ

ಹಿರಿಯೂರಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಅ.15 ರಿಂದ 17 ರವರೆಗೆ ಚಿತ್ರದುರ್ಗ ಜಿಲ್ಲೆಯ ರೈತರಿಗೆ "ಸಹಜ ಕೃಷಿ – ಸಂತೃಪ್ತ ಜೀವನಕ್ಕೆ ದಾರಿ" ಎಂಬ ವಿಷಯದ ಕುರಿತು ಮೂರು ದಿನದ ತರಬೇತಿ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ. ಅ.15ರಂದು ಬೆಳಿಗ್ಗೆ 9.30ಕ್ಕೆ ಕಾರ್ಯಕ್ರಮ ಉದ್ಘಾಟನೆಯಾಗಲಿದ್ದು, ತರಬೇತಿ ಕಾರ್ಯಕ್ರಮದಲ್ಲಿ ಏಕಾಂತಿಕ ಸಮುದಾಯದ ಪ್ರಗತಿಪರ ಸಹಜ ಕೃಷಿಕರಾದ ದಾವಣಗೆರೆಯ ಏಕಾಂತಿಕ ತೋಟದ ರಾಘವ, ಯರೇಹಳ್ಳಿಯ ಹನುಮಂತಪ್ಪ, ಚಿಕ್ಕಜಾಜೂರಿನ ವೀರೇಶ್, ಮಲೇಬೆನ್ನೂರಿನ ಪಾಂಡುರಂಗಾಚಾರಿ, ದಾವಣಗೆರೆಯ ಅಭಿಶೇಕ್, ಜಬೀವುಲ್ಲಾ, ನಿಟ್ಟೂರಿನ ಸುಜೀತ್ ಮತ್ತು ಬಾಲ್ಕಿಯ ನಿರಂಜನ ಇವರು ಕೃಷಿ ಬೆಳೆದು ಬಂದ ಹಾದಿ, ಸುಸ್ಥಿರ ಕೃಷಿ ಪದ್ಧತಿಗಳು, ಸಹಜ ಕೃಷಿಯ ಪರಿಚಯ, ಸಜೀವ ಮಣ್ಣು, ನೀರು ನಿರ್ವಹಣೆ ಮತ್ತು ಸಹಜ ಕೃಷಿಯಿಂದ ಅಂತರ್ಜಲ ಮಟ್ಟ ಹೆಚ್ಚಿಸುವ ಬಗೆ, ಕಳೆ ಮತ್ತು ಕೀಟ ನಿರ್ವಹಣೆ, ಬಹುಪಯೋಗಿ ಜೀವಂತ ಬೇಲಿ, ತೋಟಗಾರಿಕೆ ಬೆಳೆಗಳಲ್ಲಿ ಗಿಡಗಳ ಸಂಯೋಜನೆ, ಹೊಸದಾಗಿ ತೋಟ ಕಟ್ಟಲು ಅನುಸರಿಸುವ ಕ್ರಮಗಳು, ಹಾಲಿ ಇರುವ ಹಳೆಯ ತೋಟವನ್ನು ಉತ್ತಮಪಡಿಸುವ ವಿಧಾನಗಳು, ತೋಟದ ಕೆಲಸ ಮತ್ತು ಖರ್ಚು ಕಡಿಮೆ ಮಾಡಲು ಇರುವ ಪರಿಹಾರಗಳು, ಸುಲಭವಾಗಿ ಬೆಳೆಯಬಹುದಾದ ತರಕಾರಿಗಳು, ಬಿದಿರಿನ ಮಹತ್ವ, ಸಹಜ ಕೃಷಿ ಪುಸ್ತಕಗಳ ಪರಿಚಯ, ಮಳೆಯಾಶ್ರಿತ ಬೆಳೆಗಳಲ್ಲಿ ಸಹಜ ಕೃಷಿ ಅಳವಡಿಕೆ, ನೇರ ಮಾರುಕಟ್ಟೆ ವ್ಯವಸ್ಥೆ ಹಾಗೂ ಸಹಜ ಜೀವನದ ವಿಚಾರಗಳ ಕುರಿತುವಿಷಯಗಳನ್ನು ಮಂಡನೆ ಮಾಡಲಿದ್ದಾರೆ. ಈಗಾಗಲೇ ಸಹಜ ಕೃಷಿಯಲ್ಲಿ ತೊಡಗಿರುವ ಮತ್ತು ತಮ್ಮ ತಾಕಿನಲ್ಲಿ ಸಹಜ ಕೃಷಿ ಪ್ರಾರಂಭಿಸಲು ಆಸಕ್ತಿ ಇರುವ ಹಾಗೂ ಕಾರ್ಯಗಾರದ 3 ದಿನವೂ ಕಡ್ಡಾಯವಾಗಿ ತರಬೇತಿ ಕೇಂದ್ರದಲ್ಲಿ ವಾಸ್ತವ್ಯ ಮಾಡಿ ಭಾಗವಹಿಸುವ ಚಿತ್ರದುರ್ಗ ಜಿಲ್ಲೆಯ ಪ್ರತಿ ತಾಲ್ಲೂಕಿಗೆ 10 ರಂತೆ, ಆರು ತಾಲ್ಲೂಕಿನ 60 ಜನ ಉತ್ಸಾಹಿ ಯುವ ರೈತಭಾಂದವರು ದೂರವಾಣಿ ಸಂಖ್ಯೆ 8277931058 ಗೆ ಕರೆ ಮಾಡಿ ಇದೇ ಅ.13ರೊಳಗೆ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಕೋರಿದ್ದಾರೆ.

ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲು, ನೋಂದಾವಣಿ ಮಾಡಿಸದ ಮತ್ತು ನಿಗದಿತ ಸಮಯದ ನಂತರ ಬರುವ ರೈತರಿಗೆ ತರಬೇತಿಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ಮೊದಲು ನೋಂದಾವಣೆ ಮಾಡಿಕೊಂಡ ಅರ್ಹ 60 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಹಾಗೂ ತರಬೇತಿಗೆ ಹಾಜರಾಗುವ ರೈತಬಾಂಧವರು ಕಡ್ಡಾಯವಾಗಿ ತಮ್ಮ ಎಫ್‌ಐಡಿ ಕಾರ್ಡ್ ಅಥವಾ ಚುನಾವಣೆ ಗುರುತಿನ ಚೀಟಿಯನ್ನು ತರಲು ಮನವಿ ಮಾಡಲಾಗಿದೆ. ತರಬೇತಿ ಕಾರ್ಯಗಾರವು 2ನೇ ಮತ್ತು 3ನೇ ದಿನ ಬೆಳಗ್ಗೆ 6.30 ರಿಂದ ರಾತ್ರಿ 9 ಗಂಟೆಯವರೆಗೆ ವಿವಿಧ ಅಧಿವೇಶನ ಮತ್ತು ಚಟುವಟಿಕೆಗಳನ್ನು ಒಳಗೊಂಡಿರುವುದರಿಂದ ಆಸಕ್ತ ಉತ್ಸಾಹಿ ಯುವ ರೈತಭಾಂದವರು ಭಾಗವಹಿಸಲು ಕೋರಲಾಗಿದೆ.

### ನವೋದಯ 9,11ನೇ ತರಗತಿ ಪ್ರವೇಶಕ್ಕೆ ಅರ್ಜಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯದಲ್ಲಿ 2025–26ನೇ ಸಾಲಿಗೆ 9 ಮತ್ತು 11ನೇ ತರಗತಿ ಪ್ರವೇಶಾತಿಗೆ ಜಿಲ್ಲೆಯ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲಾ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.30 ಕೊನೆಯ ದಿನವಾಗಿದೆ.

9ನೇ ತರಗತಿ ಪ್ರವೇಶ ಬಯಸುವ ಅಭ್ಯರ್ಥಿಗಳು 8 ತರಗತಿಯಲ್ಲಿ ಓದುತ್ತಿದ್ದು, 2010 ಮೇ 01 ರಿಂದ 2012 ಜುಲೈ 31 ಒಳಗೆ ಜನಿಸಿರಬೇಕು. 11 ತರಗತಿ ಪ್ರವೇಶ ಬಯಸುವ ಅಭ್ಯರ್ಥಿಗಳು 10ನೇ ತರಗತಿಯಲ್ಲಿ ಓದುತ್ತಿದ್ದು, 2008 ಜೂನ್ 1 ರಿಂದ 2010ರ ಜುಲೈ 31ರ ನಡುವೆ ಜನಿಸಿರಬೇಕು. ಅಭ್ಯರ್ಥಿಗಳು ಜಿಲ್ಲೆಯ ಖಾಯಂ ನಿವಾಸಿಯಾಗಿರಬೇಕು. ವೆಬ್‌ಸೈಟ್ https://cbsietms.nic.in/2024/nvsix/restrationclassIX/registrationclassIX ºÁUÀÆ https://cbsietms.nic.in/2024/nvsix/restrationclassXI/registrationclassXI ನಲ್ಲಿ ಅರ್ಜಿ ಸಲ್ಲಸಬಹುದು.

## ವಿಧಾನ್ ಸೇ ಸಮಾಧಾನ್ ಕಾನೂನು ಅರಿವು

# ಮಹಿಳೆಯರ ವಿರುದ್ಧದ ಪ್ರಕರಣಗಳ ಸಂಖ್ಯೆ ಹೆಚ್ಚಳ ಕಳವಳಕಾರಿ: ನ್ಯಾ.ರೋಣ್ ವಾಸುದೇವ್

» ಚಿತ್ರದುರ್ಗ






ದೇಶದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯಗಳು ಹೆಚ್ಚಳವಾಗಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ರೋಣ್ ವಾಸುದೇವ ಹೇಳಿದರು.

ರಾಷ್ಟ್ರೀಯ ಮಹಿಳಾ ಆಯೋಗ ಹಾಗೂ ಕಾನೂನು ಸೇವಾ ಪ್ರಾಧಿಕಾರ ಸಹಯೋಗದಲ್ಲಿ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಲಾದ "ವಿಧಾನ್ ಸೇ ಸಮಾಧಾನ್" ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನದ ಮೂಲಭೂತ ಕರ್ತವ್ಯಗಳಲ್ಲಿ ಮಹಿಳೆಯರ ಗೌರವಕ್ಕೆ ಚ್ಯುತಿ ಬರದ ಹಾಗೆ ನಡೆದುಕೊಳ್ಳುವಂತೆ ಹೇಳಲಾಗಿದೆ. ಆದಾಗ್ಯೂ ಸಹ ದೇಶದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ಕಡಿಮೆ ಆಗಿಲ್ಲ. ಮೂಲಭೂತ ಹಕ್ಕುಗಳ ಕೇಳುವ ನಾವು ಮೂಲಭೂತ ಕರ್ತವ್ಯಗಳನ್ನು ಸಹ ಚಾಚು ತಪ್ಪದೇ ಪಾಲಿಸಬೇಕು. ಸ್ವಾತಂತ್ರ್ಯ ಪೂರ್ವದಲ್ಲಿ ಸತಿ ಪದ್ಧತಿ ನಿಷೇಧ ಕಾನೂನು ಜಾರಿಗೆ ತರಲಾಗಿದೆ. ಸ್ವಾತಂತ್ರ್ಯ ನಂತರ ದೇಶದಲ್ಲಿ 16 ಪ್ರಮುಖ ಕಾಯ್ದೆಗಳನ್ನು ಮಹಿಳೆಯರ ಸಬಲೀಕರಣ ಹಾಗೂ ರಕ್ಷಣೆಗಾಗಿ ಜಾರಿಗೆ ತರಲಾಗಿದೆ ಎಂದು ಹೇಳಿದರು.ಸ್ವಾತಂತ್ರ್ಯ ಬಂದ ತರುವಾಯ ಜಾರಿಗೊಳಿಸಿದ ಹಿಂದೂ ಉತ್ತರಾಧಿಕಾರಿ ಕಾಯ್ದೆ ಪಿತ್ರಾರ್ಜಿತ ಆಸ್ತಿಯಲ್ಲಿ ಮಹಿಳೆಯರಿಗೆ ಪಾಲು ನೀಡಿದೆ. ಈ ಮೂಲಕ ಮಹಿಳೆಯರಿಗೆ ಸಮಾನತೆ ದೊರಕಿಸಿಕೊಡುವ ಕೆಲಸ ಮಾಡಲಾಗಿದೆ. ಇದರ ಹೊರತಾಗಿ ಹಿಂದೂ ಪೋಷಕ ಕಾಯ್ದೆಯಡಿ ಮಹಿಳೆಗೆ ಪೋಷಕತ್ವದ ಹಕ್ಕು ನೀಡಲಾಯಿತು.

ಮಹಿಳೆಯರು ಮಕ್ಕಳನ್ನು ದತ್ತು ತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ. ಮಹಿಳೆಯರ ಕಳ್ಳ ಸಾಗಣೆ ತಡೆಯಲು ಮಾನವ ಕಳ್ಳ ಸಾಗಾಣಿಕೆ ನಿಷೇಧ ಕಾಯ್ದೆ, ಗೃಹ ಹಿಂಸೆಯಿಂದ ರಕ್ಷಣೆ, ವರದಕ್ಷಿಣೆ ನಿಷೇಧ, ಕೆಲಸದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆಗೆ ಕಾಯ್ದೆ ತರಲಾಗಿದೆ. ಗರ್ಭಪಾತ ನಿಷೇಧ ಕಾಯ್ದೆ, ಭ್ರೂಣಲಿಂಗ ಪತ್ತೆ ಹಾಗೂ ಭ್ರೂಣ ಹತ್ಯೆ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಮಹಿಳೆಯ ಸಬಲೀಕರಣ ಹಾಗೂ ರಕ್ಷಣೆಗೆ ಸಹಕಾರಿಯಾಗಿವೆ. ಇದರೊಂದಿಗೆ ಕೆಲಸ ಮಾಡುವ ಮಹಿಳೆಯರಿಗಾಗಿ ಸಮಾನ ವೇತನ ಹಾಗೂ ತಾಯ್ತನದ ಸೌಲಭ್ಯ ಕಾಯ್ದೆ ಜಾರಿ ಮಾಡಲಾಗಿದೆ ಎಂದು ಜಿಲ್ಲಾ ನ್ಯಾಯಾಧೀಶರಾದ ರೋಣ್ ವಾಸುದೇವ ತಿಳಿಸಿದರು.

ರಾಷ್ಟ್ರೀಯ ಮಹಿಳಾ ಆಯೋಗದ ರಚನೆ ಕಾಯ್ದೆ ಜಾರಿ ಮಾಡಿ, ರಾಷ್ಟ್ರ ಹಾಗೂ ರಾಜ್ಯ ಮಟ್ಟದಲ್ಲಿ ಶಾಶ್ವತ ಮಹಿಳಾ ಆಯೋಗ ಸ್ಥಾಪಿಸಲಾಗಿದೆ. ಇದೆಲ್ಲದರ ಹೊರತಾಗಿಯೂ ಮಹಿಳೆಯರ ರಕ್ಷಣೆ ಹಾಗೂ ಹಕ್ಕುಗಳ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಧೀಶ ಎಂ.ವಿಜಯ್ ಮಾತನಾಡಿ, ಬ್ಲಾಕ್ ಹಂತದಲ್ಲಿ ಮಹಿಳೆಯರ ಸಬಲೀಕರಣ ಸಲುವಾಗಿ ಸರ್ವೋಚ್ಚ ನ್ಯಾಯಾಲಯದ ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ ಹಾಗೂ ರಾಷ್ಟ್ರೀಯ ಮಹಿಳಾ ಆಯೋಗದಿಂದ ವಿಧಾನ್ ಸೇ ಸಮಾಧಾನ್ ಎಂಬ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ. ಮೊದಲ ಹಂತದಲ್ಲಿ ರಾಷ್ಟ್ರದ ಪ್ರಮುಖ 11 ರಾಜ್ಯಗಳಲ್ಲಿ ಜಾಗೃತಿ ಕಾರ್ಯಕ್ರಮಗಳಿಗೆ ನಡೆಸಲಾಗುತ್ತಿದೆ ಎಂದರು.

ಪುಟ 2

# ರೈಲ್ವೆ ಕೆಳಸೇತುವೆ ನೀರು ಜಮಾವಣೆ ಸರಿಪಡಿಸಿ

» ಚಿತ್ರದುರ್ಗ

ಚಿತ್ರದುರ್ಗದಿಂದ ಚಳ್ಳಕೆರೆ ರೈಲು ಮಾರ್ಗದಲ್ಲಿ ಬರುವ ಚಿತ್ರದುರ್ಗ ನಗರ ವ್ಯಾಪ್ತಿಯ ಗೋನೂರು ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ನಿರ್ಮಾಣ ಮಾಡಿರುವ ರೈಲ್ವೆ ಕೆಳಸೇತುವೆಯನ್ನು ಅವೈಜ್ಞಾನಿಕವಾಗಿ ನಿರ್ಮಾಣ ಮಾಡಲಾಗಿದ್ದು. ನಿನ್ನೆ ರಾತ್ರಿ ಸುರಿದ ಮಳೆಗೆ ಸೇತುವೆ ಕೆಳಗೆ ನೀರು ಜಮಾವಣೆಯಾಗಿ ವಾಹನ ಸಂಚಾರಕ್ಕೆ ಅಡಚಣೆಯಾಗಿರುವುದನ್ನುಸಂಸದಗೋವಿಂದಕಾರಜೋಳಇಂದು ವೀಕ್ಷಣೆ ಮಾಡಿ ರೈಲ್ವೆ ಅಧಿಕಾರಿಗಳನ್ನು ತರಾಟೆಗೆ ತಗೆದುಕೊಂಡು ಕೂಡಲೇ ಸರಿಪಡಿಸುವಂತೆ ಸೂಚನೆ ನೀಡಿದರು. ಇತ್ತೀಚಿಗೆ ಬೆಂಗಳೂರಿನಲ್ಲಿ ನಡೆದ ರೈಲ್ವೆ ಅಧಿಕಾರಿಗಳ ಸಭೆಯಲ್ಲಿ ಈ ರೀತಿ ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವ ರೈಲ್ವೆ ಕೆಳಸೇತುವೆಗಳ ಬಳಿ ನೀರು ಜಮಾವಣೆಯಾಗುತ್ತಿದ್ದು, ಇಂತಹ ಸೇತುವೆಗಳನ್ನು ಪಟ್ಟಿ ಮಾಡಿ ಸಭೆಯಲ್ಲಿ ರೈಲ್ವೆ ಅಧಿಕಾರಿಗಳ ಗಮನ ಸೆಳೆಯಲಾಗಿತ್ತು. ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇಂತಹ ಸಾಕಷ್ಟು ಸೇತುವೆಗಳ ಬಳಿ ನೀರು ಜಮಾವಣೆಯಾಗುತ್ತಿದ್ದು, ಕೂಡಲೇ ಇವುಗಳನ್ನು ಸರಿಪಡಿಸುವಂತೆ ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



# ಚಿತ್ರದುರ್ಗ ನಗರಕ್ಕೆ ಬಂದ ವಿಜಯ ಜ್ಯೋತಿ ಯಾತ್ರೆ



» ಚಿತ್ರದುರ್ಗ


ಕಿತ್ತೂರು ಉತ್ಸವದ ಪ್ರಯುಕ್ತ ಹಮ್ಮಿಕೊಂಡಿರುವ ವಿಜಯ ಜ್ಯೋತಿ ಯಾತ್ರೆಯು ಬುಧವಾರ ಚಿತ್ರದುರ್ಗ ನಗರ ತಲುಪಿತು. ಚಿತ್ರದುರ್ಗ ನಗರದ ಚಳ್ಳಕೆರೆ ಗೇಟ್ ಸಮೀಪ ಕಿತ್ತೂರು ಚೆನ್ನಾಜಿಯವರ ವಿಜಯ ಜ್ಯೋತಿ ಯಾತ್ರೆಯನ್ನು ಹರಿಹರ ವಚನಾನಂದ ಸ್ವಾಮೀಜಿಗಳು, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ ಸ್ವಾಗತಿಸಿ, ಪೂಜೆ ಸಲ್ಲಿಸಿದರು.

ಪುಟ 2

## ಪ್ರಮುಖ ಸುದ್ದಿ

# ಒಳ ಮೀಸಲು: ಕಾಂಗ್ರೆಸ್ ಡಬಲ್ ಗೇಮ್ ಆಡುತ್ತಿದ್ದಾರೆ

» ಚಿತ್ರದುರ್ಗ



ಒಳ ಮೀಸಲಾತಿ ವಿಚಾರದಲ್ಲಿ ಬಿಜೆಪಿದ್ದು ಸ್ಪಷ್ಟ ನಿಲುವಿದೆ. ನಾವು ಎಲ್ಲರಿಗೂ ನ್ಯಾಯ ಕೊಡಿಸುವ ಶಿಫಾರಸ್ಸು ಮಾಡಿದ್ದೇವೆ. ಕಾಂಗ್ರೆಸ್‌ನವರು ಡಬಲ್ ಗೇಮ್ ಆಡುತ್ತಿದ್ದಾರೆ ಎಂದು ಸಂಸದ ಗೋವಿಂದ ಎಂ.ಕಾರಜೋಳ ಆರೋಪಿಸಿದರು.

ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮೊದಲು ಸಂವಿಧಾನ ತಿದ್ದುಪಡಿ ಆದ ಮೇಲೆ ಮಾಡುತ್ತೇವೆ ಅಂತ ಕಣ್ಣೊರೆಸುವ ತಂತ್ರ ಮಾಡಿದರು. ಈಗ ಸುಪ್ರೀಂ ಕೋರ್ಟ್ ಆದೇಶ ಬಂದ ಮೇಲೆ ಚರ್ಚೆ ಮಾಡುತ್ತೇವೆ ಅಂತ ಹೇಳುತ್ತಾರೆ. ಅವರಿಗೆ ದಲಿತರಾಗಲಿ ಹಿಂದುಳಿದವರಾಗಲಿ ಅಭಿವೃದ್ಧಿ ಆಗುವುದು ಬೇಡ ಎನ್ನುವಂತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಜಾತಿ ಗಣತಿ ಹಾಗೂ ಒಳ ಮೀಸಲಾತಿ ಬಗ್ಗೆ ಬಿಜೆಪಿ ನಿಲುವಿನ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ನವರು ಬಿಜೆಪಿಯನ್ನು ಸಂವಿಧಾನ ವಿರೋಧಿ ಎಂದು ಬಿಂಬಿಸಲು ಪ್ರಯತ್ನ ಮಾಡಿದರು. ಆದರೆ, ಜನರು ಸಬ್ ಕಾ ವಿಕಾಸ್, ಶ್ರೇಷ್ಠ ಭಾರತ, ಅಮೃತ ಕಾಲ ವಿಚಾರಗಳಿಗೆ ಜನರು ಬೆಂಬಲ ಕೊಟ್ಟಿದ್ದಾರೆ. ಅಭಿವೃದ್ಧಿ ಜಾತಿ ಗಣತಿ ವಿಚಾರದಲ್ಲಿಯೂ ಅಷ್ಟೆ ಬೊಮ್ಮಾಯಿ, ಯಡಿಯೂರಪ್ಪ ಸ್ವೀಕಾರ ಮಾಡಲಿಲ್ಲ ಎಂದು ಹೇಳಿದ್ದಾರೆ. ಕಾಂತರಾಜು ಅವರು ಸಿದ್ದರಾಮಯ್ಯ ಅವರ ಅವಧಿಯಲ್ಲಿ 2017 ರಲ್ಲಿಯೇ ವರದಿ ನೀಡಿದ್ದಾರೆ. ಹಿಂದುಳಿದ ವರ್ಗದ ಚಾಂಪಿಯನ್ ಅಂತ ಹೇಳಿಕೊಳ್ಳುವವರು ಆಗ ಯಾಕೆ ಒಪ್ಪಿಕೊಳ್ಳಲಿಲ್ಲ ಎಂದು ಪ್ರಶ್ನಿಸಿದರು.

ಕಾಂತರಾಜ್ ಅವರು ಅಧ್ಯಯನ ಮಾಡಿ ವರದಿ ಸಿದ್ಧಪಡಿಸಿದ್ದರು. ಜಯಪ್ರಕಾಶ್ ಹೆಗಡೆ ಜಿಲ್ಲಾಧಿಕಾರಿಗಳಿಂದ ಮಾಹಿತಿ ಪಡೆದು ವರದಿ ತಿದ್ದುಪಡಿ ಮಾಡಿಸಿಕೊಂಡಿದ್ದಾರೆ. ಜಾತಿಗಣತಿ ವಿಚಾರದಲ್ಲಿ ಬಿಜೆಪಿ ನಿಲುವು ಸ್ಪಷ್ಟವಾಗಿದೆ. ಹಿಂದುಳಿದ ವರ್ಗದವರ ಅಭಿವೃದ್ಧಿ ಆಗಬೇಕು. ಇದು ಗೊಂದಲದ ಗೂಡಾಗಬಾರದು. ಸಮಾಜದಲ್ಲಿ ಗೊಂದಲ ಉಂಟು ಮಾಡಬಾರದು. ಸಿಎಂ ತಮ್ಮ ಮೇಲೆ ಮುಡಾ ಹಗರಣದ ಆರೋಪ ಬಂದ ಕೂಡಲೆ ಅದರಿಂದ ದಾರಿ ತಪ್ಪಿಸಲು ಜಾತಿ ಗಣತಿ ವರದಿ ಪ್ರಸ್ತಾಪ ಮಾಡುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು.ಒಳ ಮೀಸಲಾತಿ ವಿಚಾರದಲ್ಲಿ ನಮ್ಮದು ಸ್ಪಷ್ಟ ನಿಲುವಿದೆ. ನಾವು ಎಲ್ಲರಿಗೂ ನ್ಯಾಯ ಕೊಡಿಸುವ ಶಿಫಾರಸ್ಸು ಮಾಡಿದ್ದೇವೆ. ಕಾಂಗ್ರೆಸ್ ನವರು ಡಬಲ್ ಗೇಮ್ ಆಡುತ್ತಿದ್ದಾರೆ. ಮೊದಲು ಸಂವಿಧಾನ ತಿದ್ದುಪಡಿ ಆದ ಮೇಲೆ ಮಾಡುತ್ತೇವೆ ಅಂತ ಕಣ್ಣೊರೆಸುವ ತಂತ್ರ ಮಾಡಿದರು. ಈಗ ಸುಪ್ರೀಂ ಕೋರ್ಟ್ ಆದೇಶ ಬಂದ ಮೇಲೆ ಚರ್ಚೆ ಮಾಡುತ್ತೇವೆ ಅಂತ ಹೇಳುತ್ತಾರೆ. ಅವರಿಗೆ ದಲಿತರಾಗಲಿ ಹಿಂದುಳಿದವರಾಗಲಿ ಆಗುವುದು ಬೇಡ ಎಂದ ಸಂಸದರು, ಒಳ ಮೀಸಲಾತಿಯ ಬಗ್ಗೆ ಬಿಜೆಪಿ ಹೋರಾಟವನ್ನು ರೂಪಿಸಿಲಿದೆ ಮೊದಲನೆ ಹಂತವಾಗಿ ಮುಖ್ಯಮಂತ್ರಿಗಳಿಗೆ ಪಕ್ಷದವತಿಯಿಂದ ಮನವಿಯನ್ನು ಸಲ್ಲಿಸಲಾಗುವುದು. ತದ ನಂತರ ಇದರ ಬಗ್ಗೆ ರಾಜ್ಯದಲ್ಲಿ ಜಿಲ್ಲಾವಾರು ಹೋರಾಟವನ್ನು ರೂಪಿಸಲಾಗುವುದು, ನಮ್ಮ ಜೊತೆಯಲ್ಲಿ ಹೋರಾಟದ ಸಂಘಟನೆಯವರು ಬಂದರೂ ಸಹಾ ಬರಬಹುದು ನಮ್ಮ ಅಭ್ಯಂತರ ಇಲ್ಲ ಎಂದು ತಿಳಿಸಿದರು.ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ನಗರಾಧ್ಯಕ್ಷ ನವೀನ್ ಚಾಲುಕ್ಯ, ಜಿ.ಪಂ. ಮಾಜಿ ಅಧ್ಯಕ್ಷ ಮೀಸೆ ಮಹಾಲಿಂಗಪ್ಪ, ವಕ್ತಾರ ನಾಗರಾಜ್ ಬೇದ್ರೆ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅನುಸೂಚಿತ ಜಾತಿ, ಪಂಗಡ ಕಲ್ಯಾಣ ಸಮಿತಿ ಜಿಲ್ಲಾ ಪ್ರವಾಸ

» **ಚಿತ್ರದುರ್ಗ**

ಶಾಸಕ ಪಿ.ಎಂ.ನರೇಂದ್ರಸ್ವಾಮಿ ಅಧ್ಯಕ್ಷತೆಯ ಕರ್ನಾಟಕ ವಿಧಾನಮಂಡಲ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಇದೇ ಅ.19 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದೆ. ದಾವಣಗೆರೆ ಜಿಲ್ಲೆಯಿಂದ ಚಿತ್ರದುರ್ಗ ನಗರಕ್ಕೆ ಆಗಮಿಸುವ ಸಮಿತಿ, ಅಂದು ಬೆಳಿಗ್ಗೆ 10ಕ್ಕೆ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸಮುದಾಯ ಅಭಿವೃದ್ಧಿಗಾಗಿ, ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆ ಹಾಗೂ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಸಭೆ ನಡೆಸಲಿದೆ.ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಜನರ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಸಂಘ ಸಂಸ್ಥೆಗಳು ಹಾಗೂ ಸಾರ್ವಜನಿಕರು ತಮ್ಮ ಮನವಿಗಳನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸಮಿತಿ ಅಧ್ಯಕ್ಷರಿಗೆ ಸಲ್ಲಿಸಬಹುದಾಗಿದೆ. ಜಿಲ್ಲಾಧಿಕಾರಿಗಳು ಮನವಿಗಳನ್ನು ಅ.19 ರಂದು ಜರುಗುವ ಪ್ರಗತಿ ಪರಿಶೀಲನೆ ದಿನದಂದು ಸಮಿತಿ ಅಧ್ಯಕ್ಷರಿಗೆ ಸಲ್ಲಿಸುವರು. ಸದನ ಸಮಿತಿಯಲ್ಲಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ ಸೇರಿದಂತೆ ರಾಜ್ಯದ ವಿವಿಧ ವಿಧಾನ ಸಭೆ 20 ಶಾಸಕರು ಇದ್ದಾರೆ ಎಂದು ವಿಧಾನ ಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ.

### ಚಿತ್ರದುರ್ಗ ನಗರಕ್ಕೆ ಬಂದ ವಿಜಯ ಜ್ಯೋತಿ ಯಾತ್ರೆ

» **ಮೊದಲ ಪುಟದಿಂದ**

ನಗರದ ಬಿ.ಡಿ.ರಸ್ತೆಯ ಮೂಲಕ ಕಲಾ ತಂಡಗಳೊಂದಿಗೆ ಸಾಗಿದ ವಿಜಯ ಜ್ಯೋತಿ ಯಾತ್ರೆಗೆ ತರಾಸು ರಂಗಮಂದಿರದ ಮುಂಭಾಗದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸ್ವಾಗತಿಸಿ, ರಥದಲ್ಲಿದ್ದ ರಾಣಿ ಚನ್ನಮ್ಮ ಪುತ್ಥಳಿಗೆ ಹಾರ ಅರ್ಪಿಸಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ನಂತರ ಯಾತ್ರೆಯು ನಗರದ ಪ್ರವಾಸಿ ಮಂದಿರ, ಗಾಂಧಿ ವೃತ್ತದ ಮೂಲಕ ಮುರುಘಾ ರಾಜೇಂದ್ರ ಮಠದ ವರೆಗೂ ಸಂಚರಿಸಿತು. ಬ ಳ ಗಾ ವಿ ಜಿಲ್ಲೆ ಕಿತ್ತೂರಿನಲ್ಲಿ ಅ.23 ರಿಂದ 25 ರವರೆಗೆ ನಡೆಯಲಿರುವ ಕಿತ್ತೂರು ಉತ್ಸವ ಪ್ರಯುಕ್ತ ರಾಜ್ಯದಾದ್ಯಂತ ಸಂಚರಿಸುವ ಈ ವಿಜಯ ಜ್ಯೋತಿ ಯಾತ್ರೆ ತುಮಕೂರಿನಿಂದ ಚಿತ್ರದುರ್ಗ ಜಿಲ್ಲೆಗೆ ತಲುಪಿದ್ದು, ಜಿಲ್ಲೆಯಿಂದ ದಾವಣಗೆರೆ ಜಿಲ್ಲೆಗೆ ಬಿಳ್ಕೊಡಲಾಯಿತು. ಈ ಸಂದರ್ಭದಲ್ಲಿ ವಚನಾನಂದ ಸ್ವಾಮೀಜಿ, ಮಡಿವಾಳ ಮಾಚಿದೇವ ಸ್ವಾಮೀಜಿ, ಬಸವ ಕುಮಾರಸ್ವಾಮೀಜಿ, ಸೇರಿದಂತೆ ವಿವಿಧ ಸ್ವಾಮೀಜಿಗಳು, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ಸಮಾಜದ ಶಿವಪ್ರಕಾಶ್, ಪರಮೇಶ್ವರಪ್ಪ, ಗುತ್ತಿನಾಡು ಪ್ರಕಾಶ್, ಮಂಜುನಾಥ್, ಉಮಾ ರಮೇಶ್, ಶೈಲಾ ಕಲ್ಲೇಶ್, ಸವಿತಾ, ಮೋಕ್ಷಾ ರುದ್ರಸ್ವಾಮಿ ಹಾಗೂ ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಇದ್ದರು.

### ರಂಗಗೀತೆಗಳ ಕಲಿಕಾ ಕಾರ್ಯಾಗಾರಕ್ಕೆ ಅರ್ಜಿ

» **ದಾವಣಗೆರೆ**

ಕನ್ನಡ ವೃತ್ತಿ ರಂಗಭೂಮಿ ರಂಗಾಯಣ ವತಿಯಿಂದ ದಾವಣಗೆರೆಯಲ್ಲಿ ರಂಗ ಸಂಗೀತ ತರಬೇತಿ ಮತ್ತು ರಂಗ ಗೀತೆಗಳ ಕಲಿಕಾ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಹದಿನೈದು ದಿವಸಗಳ ಕಾರ್ಯಾಗಾರದಲ್ಲಿ ಧ್ವನಿ ಸಂಸ್ಕರಣೆ, ಸಂಗೀತದ ಪ್ರಾಥಮಿಕ ಪಾಠಗಳು ಮತ್ತು ರಂಗ ಗೀತೆಗಳ ಅಭಿನಯಪೂರ್ವಕ ಕಲಿಕೆಯ ತರಬೇತಿ ನೀಡಿ, ನಂತರ ಸಾರ್ವಜನಿಕ ಪ್ರದರ್ಶನ ಏರ್ಪಡಿಸಲಾಗುವುದು. ಸಂಗೀತದ ಪ್ರಾಥಮಿಕ ಜ್ಞಾನವುಳ್ಳ 18 ರಿಂದ 40 ವರ್ಷ ವಯೋಮಾನದೊಳಗಿನ ಅಭ್ಯರ್ಥಿಗಳು ತಮ್ಮ ಸ್ವವಿವರದೊಂದಿಗೆ ಅಕ್ಟೋಬರ್ 16 ರೊಳಗೆ ಜಿಲ್ಲಾಡಳಿತ ಭವನ, ಮೊದಲನೇ ಮಹಡಿ, ಕೊಠಡಿ ಸಂಖ್ಯೆ–38 "ಎ" ಪಿ.ಬಿ.ರಸ್ತೆ, ದಾವಣಗೆರೆ ದೂ.ಸಂ:08192–200635 ಇಲ್ಲಿ ಹೆಸರು ನೊಂದಾಯಿಸಲು ವೃತ್ತಿ ರಂಗಾಯಣ ವಿಶೇಷಾಧಿಕಾರಿ ರವಿಚಂದ್ರ ತಿಳಿಸಿದ್ದಾರೆ.

### ಹೈಸ್ಕೂಲ್ ಮೈದಾನದಲ್ಲಿ ಮಾರಾಟಕ್ಕೆ ಅವಕಾಶ

» **ದಾವಣಗೆರೆ**

ಆಯುಧಪೂಜೆ ಹಾಗೂ ವಿಜಯದಶಮಿ ಸಲುವಾಗಿ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದು ಗುಂಬಳ ಕಾಯಿ, ಕಾಚಿಕಡ್ಡಿ ಹಾಗೂ ಸಗಣಿ ಗುರ್ಜಿಗಳನ್ನು ಮಾರಾಟ ಮಾಡುವುದರಿಂದ ನಗರಾದ್ಯಂತ ಸಂಚಾರ ವ್ಯವಸ್ಥೆಗೆ ಹಾಗೂ ಸಾರ್ವಜನಿಕರಿಗೆ, ತೊಂದರೆಯಾಗುತ್ತಿರುವ ಕಾರಣ ಅಕ್ಟೋಬರ್ 10 ರಿಂದ 12 ರವರೆಗೆ ಹೈಸ್ಕೂಲ್ ಮೈದಾನದಲ್ಲಿ ತಾತ್ಕಾಲಿಕವಾಗಿ ನಿರ್ಮಿಸಲಾಗಿರುವ ಕೆ.ಎಸ್.ಆರ್.ಟಿ.ಸಿ ಹಾಗೂ ಖಾಸಗಿ ಬಸ್ ನಿಲ್ದಾಣದಲ್ಲಿ ಮಾತ್ರವೇ ಈ ವಸ್ತುಗಳ ವ್ಯಾಪಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ನಗರದ ಇತರೆ ಯಾವುದೇ ಭಾಗಗಳಲ್ಲಿ ರಸ್ತೆ ಸಂಚಾರಕ್ಕೆ ಅಡ್ಡಿಯಾಗದಂತೆ ಸಾಮಗ್ರಿಗಳನ್ನು ಮಾರಾಟ ಮಾಡಿ, ಉಳಿದ ಸಾಮಗ್ರಿಗಳನ್ನು ಅಲ್ಲಿಯೇ ಬಿಡದೇ ಸಾಗಿಸುವಂತೆ, ತಪ್ಪಿದಲ್ಲಿ ಪ್ರತಿ ಮಾರಾಟಗಾರರಿಂದ ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ವಸೂಲಿ ಮಾಡಲಾಗುವುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

# ಬಿಜೆಪಿ ಕಾರ್ಯಕರ್ತರ ಪಾರ್ಟಿ: ಕಾರಜೋಳ

» **ಚಿತ್ರದುರ್ಗ**

18 ವರ್ಷ ತುಂಬಿದ ಯಾರೂ ಬೇಕಾದರೂ ಸಹಾ ಬಿಜೆಪಿಯ ಸದಸ್ಯರಾಗಬಹುದಾಗಿದೆ. ಈ ಸಾರಿ ನಮ್ಮ ಪಕ್ಷದ ಸದಸ್ಯತ್ವದ ಸಂಖ್ಯೆ ದೇಶದಲ್ಲಿ 25 ಕೋಟಿ ಮೀರಬೇಕಿದೆ ಇದಕ್ಕೆ ಪಕ್ಷದ ಕಾರ್ಯಕರ್ತರು ಶ್ರಮಿಸಬೇಕಿದೆ ಎಂದು ಮಾಜಿ ಉಪ ಮುಖ್ಯಮಂತ್ರಿಗಳು, ಸಂಸದರಾದ ಗೋವಿಂದ ಕಾರಜೋಳ ಪಕ್ಷದ ಮುಖಂಡರಿಗೆ ಕರೆ ನೀಡಿದರು.

ಚಿತ್ರದುರ್ಗ ನಗರದ ಐದನೇ ವಾರ್ಡಿನ ಕೋಟೆ ಆಂಜನೇಯಸ್ವಾಮಿ ದೇವಾಲಯದ ಬಳಿ ಬುಧವಾರ ನಡೆದ ಬಿಜೆಪಿ ಪಕ್ಷದ ಸದಸ್ಯತ್ವ ಅಭಿಯಾನವನ್ನು ಪಕ್ಷಕ್ಕೆ ಸದಸ್ಯತ್ವ ಮಾಡುವುದರ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು, ಬಿಜೆಪಿ ಕಾರ್ಯಕರ್ತರ ಪಾರ್ಟಿಯಾಗಿದೆ, ಇಲ್ಲಿ ಕಾರ್ಯಕರ್ತರಿಗೆ ಹೆಚ್ಚಿನ ಮನ್ನಣೆ ಇದೆ. ಬಿಜೆಪಿಗೆ ಕಾರ್ಯಕರ್ತರೆ ಅಡಿಗಲ್ಲು ಆಗಿದೆ, ಬೇರೆ ಪಾರ್ಟಿಗಳಂತೆ ನಮ್ಮಲ್ಲಿ ಕುಟುಂಬ ಪಾರ್ಟಿ ಅಲ್ಲ ಪೂರ್ಣವಾಗಿ ಕಾರ್ಯಕರ್ತರ ಪಕ್ಷವಾಗಿದೆ. ಪ್ರತಿ ಆರು ವರ್ಷಕ್ಕೊಮ್ಮೆ ಸದಸ್ಯತ್ವ ಅಭಿಯಾನ ನಡೆಯಲಿದೆ. ಇದರಲ್ಲಿ ವರ್ಷದಿಂದ



ವರ್ಷಕ್ಕೆ ಹೆಚ್ಚಿನ ರೀತಿಯಲ್ಲಿ ಸದಸ್ಯತ್ವದ ಪ್ರಮಾಣವನ್ನು ಹೆಚ್ಚಳ ಮಾಡಬೇಕಿದೆ ಎಂದರು.

ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ, ನಗರದ 35 ವಾರ್ಡ್‌ಗಳಲ್ಲಿ ಸಮಿತಿ ರಚಿಸಿ ಹೆಚ್ಚಿನ ಸದಸ್ಯತ್ವ ನೊಂದಾಯಿಸಬೇಕಿದೆ. ಕೇಂದ್ರ ಬಿಜೆಪಿ. ಸರ್ಕಾರ ಹಾಗೂ ರಾಜ್ಯದಲ್ಲಿ ಬಿಜೆಪಿ. ಅಧಿಕಾರದಲ್ಲಿದ್ದ ಸಂದರ್ಭದಲ್ಲಿ ಸವಲತ್ತುಗಳನ್ನು ಪಡೆದುಕೊಂಡಿರುವವರು ಪ್ರತಿ ಮನೆಯಲ್ಲಿಯೂ ಸಿಗುತ್ತಾರೆ. ಅಂತಹವರನ್ನು ಹುಡುಕಿ ಪಕ್ಷದ ಯೋಜನೆಗಳ ಕುರಿತು ಮನವರಿಕೆ ಮಾಡಿ ಹೆಚ್ಚಿನ ಸದಸ್ಯತ್ವ ಪಕ್ಷಕ್ಕೆ ಸೇರ್ಪಡೆಗೊಳಿಸುವಂತೆ ತಿಳಿಸಿ ನಗರದೆಲ್ಲೆಡೆ ಸುತ್ತಾಡಿ ಎಲ್ಲೆಲ್ಲಿ ಪಕ್ಷದ ಮತಗಳು ಜಾಸ್ತಿಯಿವೆಯೋ ಅಲ್ಲೆಲ್ಲಾ ಹೆಚ್ಚು ಸದಸ್ಯತ್ವ ನೊಂದಾಯಿಸಿದರೆ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದಲ್ಲಿ ಹೆಚ್ಚಿನ ರೀತಿಯಲ್ಲಿ ಸದಸ್ಯತ್ವ ನೊಂದಾಣಿಯಾಗಬೇಕಿದೆ ಎಂದ ಕರೆ ನೀಡಿದರು.

ಹರಿಯಾಣದಲ್ಲಿ ಬಿಜೆಪಿ ಸಂಪೂರ್ಣ ಬಹುಮತ ಪಡೆದಿರುವುದು ಇಡಿ ದೇಶದ ರಾಜಕಾರಣ ಯಾವ ದಿಕ್ಕಿನಲ್ಲಿ ಸಾಗುತ್ತಿದೆ. ಎನ್ನುವುದಕ್ಕೆ ದಿಕ್ಸೂಚಿಯಾಗಿದೆ.

ಕಾಂಗ್ರೆಸ್‌ನ ಜಾತಿ ರಾಜಕಾರಣವನ್ನು ಹರಿಯಾಣ ಜನರು ತಿರಸ್ಕಾರ ಮಾಡಿದ್ದಾರೆ. ಹರಿಯಾಣದಲ್ಲಿ ಬಿಜೆಪಿ ಸ್ಪಷ್ಟ ಬಹುಮತ ಪಡೆಯಲು ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವ ಹಾಗೂ ಸ್ಥಳೀಯವಾಗಿ ಪಕ್ಷದ ಸಂಘಟನಾ ಶಕ್ತಿ ಕಾರಣ, ಲೋಕಸಭೆ ಚುನಾವಣೆಯ ನಂತರ ನಡೆಯುತ್ತಿರುವ ಮೊದಲ ಚುನಾವಣೆ ಇದಾಗಿದ್ದು, ರಾಜಧಾನಿ ದೆಹಲಿಗೆ ಹತ್ತಿರ ಇರುವ ರಾಜ್ಯದ ಚುನಾವಣೆ ದೇಶದ ರಾಜಕಾರಣ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎನ್ನುವುದನ್ನು ಸೂಚಿಸುತ್ತಿದೆ ಎಂದರು.

ಬಿಜೆಪಿ ಪ್ರಧಾನ ಕಾರ್ಯದರ್ಶಿ ಸಂಪತ್, ನಗರ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ, ನಗರಸಭೆ ಸದಸ್ಯರುಗಳಾದ ಹರೀಶ್, ಮಾಜಿ ಸದಸ್ಯರಾದ ಕೃಷ್ಣಮೂರ್ತಿ, ಲಿಂಗರಾಜು, ಯುವ ಮೋರ್ಚಾದ ರಾಮು ವಕ್ತಾರ ನಾಗರಾಜ್‌ಬೇದ್ರೆ, ಬಡಾವಣೆಯ ಮುಖಂಡರಾದ ವಸಂತರಾವ್, ಅರುಣ್ ಕುಮಾರ್, ರಾಜಾರಾಂ, ಶಿವಣ್ಣಚಾರ್, ಗಾಯತ್ರಿ ಸೇರಿದಂತೆ ಇನ್ನು ಮುಂತಾದವರು ಹಾಜರಿದ್ದರು.

# ಛಲದಿಂದ ಸ್ವಾವಲಂಬಿ ಜೀವನ ನಡೆಸಿ

» **ಚಿತ್ರದುರ್ಗ**

ಮಹಿಳೆಯರು ತಮ್ಮ ಜೀವನವನ್ನು ಸುಧಾರಿಸಲು ಹಾಗೂ ಉತ್ತಮಗೊಳಿಸಲು ಹಾಗೂ ಸಬಲೀಕರಣರಾಗಲು ಛಲ ಹಾಗೂ ಪ್ರಯತ್ನದ ಅಗತ್ಯವಿದೆ ಎಂದು ವಂದನೀಯ ಸ್ವಾಮಿ ಸಜಿ ಜಾರ್ಜ್ ತಿಳಿಸಿದ್ದಾರೆ.

ಚಿತ್ರಾ ಡಾನ್ ಬಾಸ್ಕೋ ಸಮಾಜ ಸೇವಾ ಸಂಸ್ಥೆ ಹಾಗೂ ಬ್ರೆಡ್ಸ್ ಬೆಂಗಳೂರು ಇವರ ಸಹಯೋಗದಲ್ಲಿ ವಿ ಲಿವ್ ಯೋಜನೆಯ ಫಲಾನುಭವಿಗಳಿಗಾಗಿ ಎರಡನೇ ಹಂತದಲ್ಲಿ ಐದು ದಿನಗಳ ತರಬೇತಿ ಕಾರ್ಯಗಾರದ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಮಹಿಳೆಯರು ತಮ್ಮ ಕೌಶಲ್ಯ ಹಾಗೂ ಸಾಮರ್ಥ್ಯವನ್ನುವೃದ್ಧಿಪಡಿಸಬೇಕಾಗಿದೆ,ಇದಕ್ಕಾಗಿ ಶಿಕ್ಷಣದ ಅಗತ್ಯ ಕೂಡ ಇದೆ. ಈ ನಿಟ್ಟಿನಲ್ಲಿ ಚಿತ್ರಸಂಸ್ಥೆಯು ಸಾಮರ್ಥ್ಯ ನಿರ್ಮಾಣ ಹಾಗೂ ಕುರಿ ಸಾಕಾಣಿಕೆಯ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಗಾರಗಳನ್ನು ನಡೆಸುತ್ತಿದ್ದು ನೀವೆಲ್ಲರೂ ಕೂಡ ಈ ಕಾರ್ಯಗಾರದ ಸದುಪಯೋಗವನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಕುರಿ ಹಾಗೂ ಉಣ್ಣೆ ನಿಗಮದ ಉಪ ನಿರ್ದೇಶಕರಾದ ಡಾ. ತಿಪ್ಪೇಸ್ವಾಮಿಯವರು ಮಾತನಾಡಿ ಕುರಿ ಸಾಕಣಿಕೆಯ ಕೌಶಲ್ಯಗಳು, ತಳಿಯ ಆಯ್ಕೆ, ತಳಿಯ ಆಯ್ಕೆಯಲ್ಲಿ




ಗಮನಿಸಬೇಕಾದಂತಹ ಅಂಶಗಳು, ಕುರಿಗಳಿಗೆ ಕೊಟ್ಟಿಗೆ ಹಾಗೂ ಅವುಗಳಿಗೆ ಮೇವು ಹಾಕುವ ವಿಧಾನವನ್ನು ಹಾಗೂ ತಳಿಯ ವಿಧಗಳ ಬಗ್ಗೆ ವಿವರವಾಗಿ ತಿಳಿಸಿಕೊಟ್ಟರು.

ಪಶು ಸಖಿಯಾದ ಸಿದ್ದಮ್ಮನವರು ಕುರಿ/ ಮೇಕೆ ಗಳಿಗೆ ಮೇವು ಹಾಕುವ ವಿಧಾನದ ಬಗ್ಗೆ ತಿಳಿಸಿಕೊಟ್ಟರು. ಡಿಎಸ್ ಹಳ್ಳಿಯ ಪಶು ವೈದ್ಯಾಧಿಕಾರಿ ಡಾ. ದೀಪಿಕಾ, ಮಹಿಳೆಯರನ್ನ ಉದ್ದೇಶಿಸಿ ಮಾತನಾಡಿ ಕುರಿ/ ಮೇಕೆಗಳ ಮೇವು, ಮೇವನ್ನು ಶೇಖರಿಸಿಡುವ ವಿಧಾನ ಹಾಗೂ ಮೇವುಗಳ ಕೃಷಿ ವಿಧಾನವನ್ನು ವಿವರಿಸಿದರು.

ಈ ತರಬೇತಿಯ ಉದ್ಘಾಟನೆಯನ್ನು ಗಿಡಕ್ಕೆ ನೀರು ಹಾಕುವುದರ ಮೂಲಕ ಡಾನ್ ಬಾಸ್ಕೋ ಸಂಸ್ಥೆಯ ನಿರ್ದೇಶಕರಾದ ವಂದನೀಯ ಸ್ವಾಮಿ ಸಜಿ ಜಾರ್ಜ್ ನಡೆಸಿಕೊಟ್ಟರು. ಚಿತ್ರ ಡಾನ್ ಬೋಸ್ಕೋ ಸಂಸ್ಥೆಯ ಆಡಳಿತಾಧಿಕಾರಿಗಳಾದ ವಂದನೀಯ ಸ್ವಾಮಿ ವಿ.ಎಂ. ಮ್ಯಾಥ್ಯೂ ಭಾಗವಹಿಸಿದ್ದರು ಕಾರ್ಯಕ್ರಮದಲ್ಲಿ 30 ವಿ ಲೀವ್ ಯೋಜನೆಯ ಫಲಾನುಭವಿಗಳು ಹಾಗೂ ಚಿತ್ರ ಸಿಬ್ಬಂದಿಗಳು ಹಾಜರಿದ್ದರು.

## ಮಹಿಳೆಯರ ವಿರುದ್ಧದ ಪ್ರಕರಣಗಳ ಸಂಖ್ಯೆ ಹೆಚ್ಚಳ ಕಳವಳಕಾರಿ

» **ಮೊದಲ ಪುಟದಿಂದ**

2022 ಎನ್.ಸಿ.ಆರ್.ಬಿ ದತ್ತಾಂಶಗಳ ಅನುಸಾರ ಕಳೆದ ವರ್ಷಕ್ಕೆ




ಹೋಲಿಸಿದರೆ ಶೇ.4 ರಷ್ಟು ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ಹೆಚ್ಚಾಗಿವೆ. ಗೃಹ ಹಿಂಸೆ, ಕೆಲಸದ ಸ್ಥಳದಲ್ಲಿ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಏರಿಕೆ ಆಗಿರುವುದು ಕಳವಳ ಮೂಡಿಸಿದೆ. ಮಹಿಳೆಯರ ದೌರ್ಜನ್ಯ ವಿರುದ್ಧ ಪ್ರಕರಣಗಳ ಪೈಕಿ ಶೇ.10 ರಷ್ಟು ಪ್ರಕರಣಗಳು ಸೈಬರ್ ರೂಪದ ಅಪರಾಧಗಳು ಆಗಿವೆ ಎಂದು ತಿಳಿಸಿದರು.ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಮಾತನಾಡಿ, ವಿಶ್ವ ಸಂಸ್ಥೆ 2030 ಸುಸ್ಥಿರ ಅಭಿವೃದ್ಧಿ ಗುರಿಯಲ್ಲಿ, ಮಹಿಳೆಯರ ವಿರುದ್ಧದ ತಾರತಮ್ಯ ತೊಡೆದು ಹಾಕಿ ಲಿಂಗ ಸಮಾನತೆ ತರುವ ಯೋಜನೆ ರೂಪಿಸಿದೆ. ಇದನ್ನು ಸಾಧಿಸಲು ನಮ್ಮ ಮನೋಭಾವದಲ್ಲಿ ಬದಲಾವಣೆ ಮೂಡಬೇಕಿದೆ. ಸಮಾಜದ ಅಂಚಿನಲ್ಲಿರುವ ಮಹಿಳೆಯರನ್ನು ಮುಖ್ಯವಾಹಿನಿಗೆ ತರಬೇಕು.

ರಾಜ್ಯ ಸರ್ಕಾರವು ಸಹ ಲಿಂಗ ಸಮಾನತೆ ತರಲು ಅನೇಕ ಕಾರ್ಯಕ್ರಮ ಜಾರಿಗೊಳಿಸಿದೆ. ಜಿಲ್ಲಾ ಪಂಚಾಯಿತಿ 189 ಗ್ರಾಮ ಪಂಚಾಯಿತಿಗಳ ಕಸ ವಿಲೇವಾರಿ ವಾಹನಗಳ ಚಾಲನೆಯ ತರಬೇತಿಯನ್ನು ನೀಡಲಾಗಿದೆ. ನರೇಗಾದಡಿ ಕೆಲಸ ಮಾಡುವ ಮಹಿಳೆಯ ಪುಟ್ಟ ಮಕ್ಕಳನ್ನು ನೋಡಿಕೊಳ್ಳಲು ಕೂಸಿನ ಮನೆಗಳನ್ನು ನಿರ್ಮಿಸಲಾಗಿದೆ. ಗ್ರಾ.ಪಂಗಳಲ್ಲಿ ನಲ್ ಜಲ್ ಮಿತ್ರ ಎನ್ನುವ ಕಾರ್ಯಕ್ರಮ ಜಾರಿ ಮಾಡಿ ಮಹಿಳೆಯರಿಗೂ ಸಹ ಕುಡಿಯುವ ನೀರು ಸರಬರಾಜು ಮಾಡುವ ವ್ಯವಸ್ಥೆಗಳಲ್ಲಿ ಕೆಲಸ ನಿರ್ವಹಿಸಲು ಆಯ್ದ ಮಹಿಳೆಯರಿಗೆ ತರಬೇತಿ ನೀಡಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸರಸ್ವತಿ ಕಾನೂನು ಕಾಲೇಜ್ ಸಹಾಯಕ ಪ್ರಾಧ್ಯಾಪಕ ಡಾ.ಎನ್.ಡಿ.ಗೌಡ ಅವರು ಡಿವಿ ಆಕ್ಟ್ ಬಿಎನ್‌ಎಸ್ ಅಡಿಯಲ್ಲಿ ಕ್ರೌರ್ಯ ಮತ್ತು ವರದಕ್ಷಿಣೆ ಕಿರುಕುಳ ಕುರಿತು ಉಪನ್ಯಾಸ ನೀಡಿದರು. ಮನೋವೈದ್ಯ ಡಾ.ಮಂಜುನಾಥ್ ಸಿ.ಜೆ.ಹಳ್ಳಿ ಅವರು ಕೌಟುಂಬಿಕ ಹಿಂಸಾಚಾರ ಮತ್ತು ಇದು ಮಹಿಳೆಯರ ಮಾನಸಿಕ ಆರೋಗ್ಯದ ಮೇಲೆ ಪರಿಣಾಮದ ಕುರಿತು ಹಾಗೂ ಜಿಲ್ಲಾ ಅಭಿರಕ್ಷಕ ಎಂ. ಮೂರ್ತಿ, ಐಪಿಸಿ ಮತ್ತು ಬಿಎನ್‌ಎಸ್ ಮತ್ತು ಮಾನವ ಕಳ್ಳಸಾಗಾಣೆ ಅಡಿಯಲ್ಲಿ ಮಹಿಳೆಯರ ವಿರುದ್ಧದ ಅಪರಾಧಗಳ ಕುರಿತು ಮಾಹಿತಿ ನೀಡಿದರು. ಸೈಬರ್ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ವೆಂಕಟೇಶ್ ಮಹಿಳೆಯರಿಗೆ ಸೈಬರ್ ಸುರಕ್ಷತೆಯ ಬಗ್ಗೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಾಯಕ ನಿರ್ದೇಶಕಿ ಎನ್.ಪವಿತ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಡಿಯಲ್ಲಿ ಮಹಿಳೆಯರಿಗಾಗಿ ಇರುವ ಯೋಜನೆಗಳ ಬಗ್ಗೆ ತಿಳಿಸಿದರು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ಉಚಿತ ಸಹಾಯವಾಣಿ ಸಂಖ್ಯೆ 15100 ಯನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ವಕೀಲರ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಸರಸ್ವತಿ ಕಾನೂನು ಕಾಲೇಜು ಪ್ರಾಂಶುಪಾಲೆ ಸುಧಾದೇವಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್ ಸೇರಿದಂತೆ ಮತ್ತಿತರರು ಇದ್ದರು.



## ವಿವಿಧ ಕಚೇರಿಗಳಿಗೆ ಡಿಸಿ ಅನಿರೀಕ್ಷಿತ ಭೇಟಿ

» **ದಾವಣಗೆರೆ**

ಜಿಲ್ಲಾಧಿಕಾರಿಯವರು ಪ್ರಾದೇಶಿಕ ಸಾರಿಗೆ ಕಚೇರಿ ಮತ್ತು ಉಪನೋಂದಣಾಧಿಕಾರಿಗಳ ಕಚೇರಿಗೆ ಬುಧವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿ ಅಲ್ಲಿ ಕಂಡು ಬಂದ ಮಧ್ಯವರ್ತಿಗಳಿಗೆ ಖಡಕ್ ಎಚ್ಚರಿಕೆ ನೀಡಿದರು.

ಪ್ರಾದೇಶಿಕ ಸಾರಿಗೆ ಕಚೇರಿ ಭೇಟಿ ನೀಡಿ ಕೌಂಟರ್‌ನಲ್ಲಿ ನಿಂತಿದ್ದ ಸಾರ್ವಜನಿಕರ ಎಫ್.ಸಿ, ನವೀಕರಣ, ಡ್ರೈವಿಂಗ್ ಲೈಸೆನ್ಸ್ ಹಾಗೂ ವಿವಿಧ ಪರವಾನಿಗೆ ಪಡೆದ ಕಡತಗಳನ್ನು ಪರಿಶೀಲಿಸಿದರು. ತದನಂತರ ಉಪನೋಂದನಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿ ಬಗ್ಗೆ ಪರಿಶೀಲಿಸಿದರು.

## ಪ್ರಮುಖ ಸುದ್ದಿ

# ಕೋಡಿಬಿದ್ದ ನಗರಂಗೆರೆ ಕೆರೆ: ಶಾಸಕ ರಘುಮೂರ್ತಿ ಅವರಿಂದ ಗಂಗಾಪೂಜೆ ಹಾಗೂ ಬಾಗಿನ ಅರ್ಪಣೆ

» **ಚಳ್ಳಕೆರೆ**

ಇತ್ತೀಚೆಗೆ ಬಂದ ಉತ್ತಮ ಮಳೆಗೆ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬಹುತೇಕ ಕೆರೆಗಳು ತುಂಬಿಹರಿಯುತ್ತಿರುವುದು ಸಂತಸ ತಂದಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬುಧವಾರ ಮಧ್ಯಾಹ್ನ ತುಂಬಿಕೋಡಿಬಿದ್ದ ನಗರಂಗೆರೆ ಕೆರೆಗೆ ಭೇಟಿ ನೀಡಿ, ಗಂಗಾಪೂಜೆ ಸಲ್ಲಿಸಿ, ಬಾಗಿನ ಅರ್ಪಿಸಿ ಮಾತನಾಡಿದರು. ವಿಶೇಷವಾಗಿ ನಗರಂಗೆರೆ ಕೆರೆ ಈ ವರ್ಷವೂ ತುಂಬಿ ಕೋಡಿಬಿದಿದ್ದ ಪರಿಣಾಮ ಈ ಭಾಗದ ಜನರಲ್ಲಿ ಸಂತೋಷ ಮನೆ ಮಾಡಿದೆ. ಗ್ರಾಮದ ಜನರಲ್ಲಿ ಹೊಸ ಉತ್ಸಾಹ ಕಾಣಲಾಗುತ್ತಿದೆ, ಕಳೆದ 2022ರಲ್ಲಿ ಭಾರಿಪ್ರಮಾಣದ ಜನರನ್ನು ಸೇರಿಸಿ ತೆಪ್ಪೋತ್ಸವ ಆಚರಿಸಲಾಗಿತ್ತು. ಮತ್ತೊಮ್ಮೆ ಗ್ರಾಮದ ಕೆರೆ ತುಂಬಿದ್ದು, ಈ ಭಾಗದಲ್ಲಿ ಇನ್ನೂ ಮುಂದೆ



ಉತ್ತಮ ಬೆಳೆಯನ್ನು ನಿರೀಕ್ಷೆ ಮಾಡಬಹುದು. ಪ್ರಸ್ತುತ ಈ ವರ್ಷದ ಮಳೆಯಲ್ಲಿ ಮೊದಲ ಬಾರಿಗೆ ಈ ಕೆರೆಕೋಡಿಬಿದ್ದಿರುವುದು ವಿಶೇಷ. ಗ್ರಾಮದ ಕೆರೆಯ ನೀರು ಸರಾಗವಾಗಿ ಹರಿಯುತ್ತಿದ್ದು, ಏನಾದರೂ ಸಮಸ್ಯೆ ಇದ್ದರೆ ಗಮನಕ್ಕೆತರುವಂತೆ ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಮ್ಮರಂಗಸ್ವಾಮಿ, ಕೆಡಿಪಿ ಸದಸ್ಯ ಅಂಗಡಿರಮೇಶ್, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಸದಸ್ಯರಾದ ಎಂ.ಕುಮಾರಸ್ವಾಮಿ, ಹಿದಾಯಿತ್‌ವುಲ್ಲಾ, ಶೈಲಪ್ಪ, ಎನ್.ಮಂಜುನಾಥ, ಗ್ರಾಮದ ಮುಖಂಡರಾದ ಸಿ.ಓಬಯ್ಯ, ತಿಪ್ಪೇರುದ್ರಪ್ಪ, ಮೈಲಾರಪ್ಪ,ಸಣ್ಣಬೋರಣ್ಣ,ಪಾಲನೇತ್ರನಾಯಕ, ಮೈನಾಬಾಬು, ಡೈರಿಮಂಜಣ್ಣ, ಶಲ್ಯದ್ಯಾಮಣ್ಣ, ಅಂಗಡಿಬಸವರಾಜು, ವಸಂತಕುಮಾರ್, ಸುದರ್ಶನ್,ಮಂಜುನಾಥಯ್ಯಮುಂತಾದವರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಕ್ರೀಡಾ ವಸತಿ ನಿಲಯದ ಖೋ-ಖೋ ತಂಡಕ್ಕೆ ಬೆಳ್ಳಿಪದಕ



» **ದಾವಣಗೆರೆ**

ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಅಕ್ಟೋಬರ್ 3 ರಿಂದ 6 ರವರೆಗೆ ನಡೆದ ರಾಜ್ಯ ಮಟ್ಟದ ದಸರಾ ಕ್ರೀಡಾಕೂಟದ ಖೋ-ಖೋ ಪಂದ್ಯಾವಳಿಯಲ್ಲಿ ನಗರದ ಕ್ರೀಡಾ ವಸತಿ ನಿಲಯದ ಪುರುಷರ ಖೋ-ಖೋ ತಂಡವು ಬೆಳ್ಳಿ ಪದಕ ಪಡೆದಿದೆ. ತಂಡದಿಂದ ಗಗನ್, ಸಿದ್ಧರೂಢ, ಶರತ್, ಅರ್ಜುನ, ಮಹಮ್ಮದ್ ತಾಸೀನ್, ನಾಗರಾಜ, ರಾಜು, ಧನರಾಜ್, ಆಸೀಫ್, ಷರೀಫ್, ಲಕ್ಷ್ಮಣ ಹಾಗೂ ಲಂಕೇಶ ಇವರುಗಳು ಉತ್ತಮ ಪ್ರದರ್ಶನ ನೀಡಿರುತ್ತಾರೆ. ತಂಡದ ತರಬೇತುದಾರರಾಗಿ ರಾಮಲಿಂಗಪ್ಪ.ಜೆ, ತಂಡದ ವ್ಯವಸ್ಥಾಪಕರಾಗಿ ರವಿ.ಕೆ ಇವರು ಭಾಗವಹಿಸಿದ್ದರು.

### ಮದ್ಯ ಮಾರಾಟ ನಿಷೇಧ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಲ್ಲಿ ಅಕ್ಟೋಬರ್ 11 ಮತ್ತು 12 ರಂದು ಆಯುಧ ಪೂಜೆ ಮತ್ತು ವಿಜಯ ದಶಮಿ ಹಬ್ಬ ಆಚರಿಸಲಿದ್ದು. ಈ ವೇಳೆ ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತಿ ಕಾಪಾಡುವ ಮುನ್ನೆಚ್ಚರಿಕೆ ಕ್ರಮವಾಗಿ ಅಕ್ಟೋಬರ್ 12 ರ ಬೆಳಿಗ್ಗೆ 6 ರಿಂದ ಮಧ್ಯರಾತ್ರಿ 12 ಗಂಟೆವರೆಗೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಿ ಮದ್ಯದಂಗಡಿ ಮುಚ್ಚಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

### ಎಸ್.ರಾಜುಗೆ ಡಾಕ್ಟರೇಟ್

» **ದಾವಣಗೆರೆ**



ತಾಲೂಕಿನ ಬಿ.ಚಿತ್ತಾನಹಳ್ಳಿ ಗ್ರಾಮದ ಎಸ್.ರಾಜು ಅವರಿಗೆ ಕುವೆಂಪು ವಿಶ್ವವಿದ್ಯಾಲಯ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಕುವೆಂಪು ವಿಶ್ವವಿದ್ಯಾಲಯದ ಸಮಾಜಶಾಸ್ತ್ರ ವಿಭಾಗದ ಪ್ರಾಧ್ಯಾಪಕ ಡಾ.ಇ.ಚಂದ್ರಶೇಖರ್ ಮಾರ್ಗದರ್ಶನದಲ್ಲಿ ಸಮಾಜಶಾಸ್ತ್ರ ವಿಭಾಗದಲ್ಲಿ 'ಉನ್ನತ ಶಿಕ್ಷಣದಲ್ಲಿ ಗ್ರಾಮೀಣ ಯುವಜನತೆಯ ಸಮಸ್ಯೆಗಳು; ಸಮಾಜಶಾಸ್ತ್ರೀಯ ಅಧ್ಯಯನ' ವಿಷಯ ಕುರಿತು ಮಹಾಪ್ರಬಂಧ ಮಂಡಿಸಿದ್ದರು. ಎಸ್.ರಾಜು ದೇವರಬೆಳೆಕೆರೆ ಶಿವಾನಂದಪ್ಪ ಮತ್ತು ರತ್ನಮ್ಮ ದಂಪತಿಯ ಪುತ್ರನಾಗಿದ್ದಾರೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪ್ರೊ.ಬಸವರಾಜ ತಹಸೀಲ್ದಾರ್, ಪತ್ನಿ ಹಾಗೂ ಪ್ರಾಧ್ಯಾಪಕಿ ಡಾ.ಎಸ್.ಯಶೋಧ, ಪುತ್ರರಾದ ಆರ್.ಸಮಥ್, ಆರ್.ಶರತ್, ಸಹೋದರ ಡಾ.ಗಿರಿಧರ್ ಅಭಿನಂದನೆ ಸಲ್ಲಿಸಿದ್ದಾರೆ.

### ರಾಘವೇಂದ್ರರಾವ್ ನಿಧನ

» **ಚಿತ್ರದುರ್ಗ**



ಪತ್ರ ಬರಹಗಾರರಾಗಿದ್ದ ರಾಘವೇಂದ್ರರಾವ್(75) ಮಂಗಳವಾರ ಮಧ್ಯಾಹ್ನ 2-10 ಕ್ಕೆ ಧರ್ಮಶಾಲಾ ರಸ್ತೆಯಲ್ಲಿರುವ ನಿವಾಸದಲ್ಲಿ ನಿಧನರಾದರು. ಅನಾರೋಗ್ಯದಿಂದ ಬಳಲುತ್ತಿದ್ದ ರಾಘವೇಂದ್ರರಾವ್ ಕೊನೆಯುಸಿರೆಳೆದಿದ್ದು, ಪತ್ನಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಚಿತ್ರದುರ್ಗದ ಮುಕ್ತಿಧಾಮದಲ್ಲಿ ನೆರವೇರಿತೆಂದು ಕುಟುಂಬದವರು ತಿಳಿಸಿದ್ದಾರೆ.

### ಟಿ.ಪ್ರಕಾಶ್ ನಿಧನ

» **ಚಳ್ಳಕೆರೆ**



ಇಲ್ಲಿನ ಎಪಿಎಂಸಿ ಮಾಜಿ ಅಧ್ಯಕ್ಷ ಟಿ.ಪ್ರಕಾಶ್(55) ಅನಾರೋಗ್ಯ ನಿಮಿತ್ತ ಅವರ ಸ್ವಗೃಹದಲ್ಲಿ ಬೆಳಗಿನಜಾವ ನಿಧನರಾಗಿದ್ದು, ಅವರ ಅಂತ್ಯಕ್ರಿಯೆ ಅವರ ಹುಟ್ಟೂರು ಗಜ್ಜುಗಾನಹಳ್ಳಿಯಲ್ಲಿ ಸಂಜೆ ನಡೆಯಿತು. ಪತ್ನಿ, ಮೂವರು ಪುತ್ರರು ಹಾಗೂ ಅಪಾರಬಂಧುಬಳಗವನ್ನು ಅಗಲಿದ್ದಾರೆ. ಸುದ್ದಿ ತಿಳಿದ ಕೂಡಲೇ ಕಾಂಗ್ರೆಸ್ ಪಕ್ಷದ ಅನೇಕ ನಾಯಕರು, ಕಾರ್ಯಕರ್ತರು ಅವರ ಮನೆಗೆ ಭೇಟಿ ನೀಡಿ ಮೃತರ ಅಂತಿಮದರ್ಶನ ಪಡೆದರು.

### ಲೋಕ ಅದಾಲತ್

» **ಚಿಕ್ಕಮಗಳೂರು**


ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಡಿ.14 ರಂದು ರಾಷ್ಟ್ರೀಯ ಲೋಕ ಅದಾಲತ್‌ನ್ನು ಆಯೋಜಿಸಲಾಗಿದೆ. ಈ ಲೋಕ ಅದಾಲತ್‌ನಲ್ಲಿಹೆಚ್ಚಿನಸಂಖ್ಯೆಯಲ್ಲಿಸಾರ್ವಜನಿಕರು, ಕಕ್ಷಿದಾರರು ಭಾಗವಹಿಸಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವಕಾಶವಿದ್ದು ಸಾರ್ವಜನಿಕರು ರಾಷ್ಟ್ರೀಯ ಲೋಕ ಅದಾಲತ್‌ನ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹನುಮಂತಪ್ಪ .ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದಕ್ಷತೆ, ಪ್ರಾಮಾಣಿಕ ಸೇವೆಯಿಂದ ಜನರ ಮನಸ್ಸು ಗೆಲ್ಲಿ: ತಹಶೀಲ್ದಾರ್ ರೇಹಾನ್‌ಪಾಷ

# ಗ್ರಾಮ ಆಡಳಿತಾಧಿಕಾರಿಗಳ ಕಚೇರಿ ಉದ್ಘಾಟನೆ

» **ಚಳ್ಳಕೆರೆ**

ರಾಜ್ಯ ಸರ್ಕಾರ ಜನಪ್ರಿಯ ಯೋಜನೆಗಳು ಮತ್ತು ಅವುಗಳನ್ನು ಸೂಕ್ತಫಲಾನುಭವಿಗಳಿಗೆ ಆಯ್ಕೆ ಮಾಡಿ ಅವರಿಗೆ ಸೌಲಭ್ಯವನ್ನು ನೀಡುವ ಮಹತ್ತರ ಜವಾಬ್ದಾರಿ ಕಂದಾಯ ಇಲಾಖೆ ಮೇಲಿದೆ. ಕಂದಾಯ ಇಲಾಖೆ ಸರ್ಕಾರದ ಪ್ರಮುಖ ಇಲಾಖೆಯಲ್ಲಿ ಒಂದಾಗಿದ್ದು, ಇಲಾಖೆಗೆ ಹೆಚ್ಚು ಗೌರವಬರಬೇಕಾದಲ್ಲಿ ಗ್ರಾಮ ಲೆಕ್ಕಾಧಿಕಾರಿಗಳು ಪ್ರಾಮಾಣಿಕತೆಯಿಂದ ಮಾಡುವ ಕೆಲಸದ ಮೇಲೆ ಅವಲಂಬಿತವಾಗಿದೆ. ಆದ್ದರಿಂದ ಗ್ರಾಮಲೆಕ್ಕಾಧಿಕಾರಿಗಳುಕಂದಾಯಇಲಾಖೆ ಮೌಲ್ಯವನ್ನು ಹೆಚ್ಚಿಸಲು ಸಾರ್ವಜನಿಕರಿಗೆ ಸರ್ಕಾರದ ನಿಯಮಗಳಲ್ಲೇ ಉತ್ತಮ ಕೆಲಸ ಮಾಡುವ ಮೂಲಕ ಮಾದರಿಯಾಗಬೇಕೆಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದರು.




ಅವರು, ಬುಧವಾರ ಹಳೇ ತಾಲ್ಲೂಕು ಕಚೇರಿ ಮೇಲ್ಭಾಗದ ಕೊಠಡಿಯಲ್ಲಿ ತಾಲ್ಲೂಕು ಗ್ರಾಮ ಆಡಳಿತ ನೌಕರರ ಸಂಘದ ನೂತನ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮ ಲೆಕ್ಕಾಧಿಕಾರಿಗಳು ತಮಗೆ ನಿಗದಿಪಡಿಸಿದ ಪಿರ್ಕಾದಲ್ಲೇ ಸದಾಇದ್ದು ಜನರ ಸಮಸ್ಯೆಗೆ ಸದಾಸ್ಪಂದಿಸಬೇಕು. ಪ್ರಕೃತಿ ವಿಕೋಪವೂ ಸೇರಿದಂತೆ ಯಾವುದೇ ದುರಂತ ಸಂಭವಿಸಿದರೂ ಅದಕ್ಕೆ ಪರಿಹಾರವನ್ನು ನೀಡುವ ನಿಟ್ಟಿನಲ್ಲಿ ಸೂಕ್ತದಾಖಲಾತಿ ಸಿದ್ದಪಡಿಸುವ ಜವಾಬ್ದಾರಿ ನಿಮ್ಮಮೇಲಿದೆ. ನೀವೆಲ್ಲರೂ ಉತ್ತಮವಾಗಿ ಕೆಲಸ ಮಾಡಿ ಕಂದಾಯ ಇಲಾಖೆ ಗೌರವವನ್ನು ಹೆಚ್ಚಿಸಿ ಎಂದರು. ಇದೇ ಸಂದರ್ಭದಲ್ಲಿ ಕರ್ತವ್ಯದ ಸಮಯ ನಂತರ ವರ್ಚುಲ್ ಸಭೆ ನಡೆಸುವುದು, ರಜೆ ದಿನಗಳಲ್ಲೂ ಕಚೇರಿಗೆ ಆಗಮಿಸಿ ಕೆಲಸ ನಿರ್ವಹಿಸುವಂತೆ ತಾಕೀತು ಮಾಡುವುದು ಸೇರಿದಂತೆ ಹಲವಾರು ಕಾರ್ಯಗಳನ್ನು ಕೈಬಿಡುವಂತೆ ತಹಶೀಲ್ದಾರ್‌ಗೆ ಮನವಿ ಅರ್ಪಿಸಲಾಯಿತು. ಶಿರಸ್ತೇದಾರ್ ಸದಾಶಿವಪ್ಪ, ತಳಕು ನಾಡಕಚೇರಿ ತಹಶೀಲ್ದಾರ್ ರಫೀ, ನಾಯಕನಹಟ್ಟಿ ನಾಡಕಚೇರಿ ತಹಶೀಲ್ದಾರ್ ಶಕುಂತಲ, ತಳಕು ಕಂದಾಯಾಧಿಕಾರಿ ಲಿಂಗೇಗೌಡ,ರಾಜೇಶ್,ತಿಪ್ಪೇಸ್ವಾಮಿ,ಗ್ರಾಮ ಆಡಳಿತಾಧಿಕಾರಿ ಪ್ರಕಾಶ್, ಹಿರಿಯಪ್ಪ, ರಂಗನಾಥು ಉಪಸ್ಥಿತರಿದ್ದರು.

# ಹೈನುಗಾರಿಕೆ ರೈತರಿಗೆ ಆರ್ಥಿಕ ಸಬಲತೆಗೆ ಉಪಕಸುಬು

» **ಚನ್ನಗಿರಿ**

ಹೈನುಗಾರಿಕೆಯಿಂದ ರೈತರು ತಮ್ಮ ಕಷ್ಟದ ಸಮಯದಲ್ಲಿ ಆರ್ಥಿಕ ಸಮಸ್ಯೆ ಬಗೆಹರಿಸಿಕೊಳ್ಳಬಹುದೆಂದು ಶಾಸಕರಾದ ಬಸರಾಜು ವಿ ಶಿವಗಂಗಾ ತಿಳಿಸಿದರು. ಬೆಳ್ಳಿಗನೂಡು ಗ್ರಾಮದಲ್ಲಿ ಕೃಷಿ ಇಲಾಖೆಯಿಂದ 2024-25 ನೇ ಸಾಲಿನ ಆರ್.ಕೆ.ವಿ.ವೈ-(ಆರ್.ಎ.ಡಿ) ಯೋಜನೆಯಡಿ ಸಾಮಾನ್ಯ ವರ್ಗದ 45 ರೈತರಿಗೆ 12.50 ಲಕ್ಷ, ವಿಶೇಷ ಘಟಕ ಯೋಜನೆಯಡಿ 10 ರೈತರಿಗೆ 3.00 ಲಕ್ಷ ಹಾಗೂ ಗಿರಿಜನ ಉಪಯೋಜನೆಯಡಿ 1.50 ಲಕ್ಷ ಸಹಾಯಧನದಲ್ಲಿ 5 ಮಂದಿ ರೈತರಿಗೆ ಜಾನುವಾರುಗಳನ್ನು ವಿತರಿಸಿ ಈ ವಿಷಯ ತಿಳಿಸಿದರು. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಮಳೆಯಾಶ್ರಿತ ಪ್ರದೇಶ ಅಭಿವೃದ್ಧಿ ಯೋಜನೆ (ಆರ್.ಕೆ.ವಿ.ವೈ- ಆರ್.ಎ.ಡಿ) ಅಡಿಯಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಅನುಷ್ಠಾನ ಮಾಡಲಾಗಿದೆ. ತೋಟಗಾರಿಕಾ ಬೆಳೆಗಳು ಕೃಷಿ ಬೆಳೆಗಳ ಜೊತೆಯಲ್ಲಿ ಹೈನುಗಾರಿಕೆಯನ್ನು ಕೈಗೊಂಡಾಗ ರೈತರಿಗೆ ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಲು ಸಾವಯವ ಗೊಬ್ಬರ ಮತ್ತು ರೈತರ ಆದಾಯವನ್ನು ಹೆಚ್ಚಿಸಬಹುದಾಗಿದೆ. ಈ ನಿಟ್ಟಿನಲ್ಲಿ ರೈತರು ಕೃಷಿ ಪದ್ಧತಿಯಲ್ಲಿ ಅಳವಡಿಸಿಕೊಂಡು ಅಭಿವೃದ್ಧಿಯಾಗಬೇಕೆಂದರು. ಸರ್ಕಾರ ರೈತರ ಹಿತ ಕಾಪಾಡಲು ಸದಾ ಬದ್ಧವಿದೆ, ಹಲವು ಯೋಜನೆಗಳ ಮೂಲಕ ರೈತರ ಬಾಳಿಗೆ ಬೆಳಕಾಗುತ್ತಿದೆ ಎಂದರು. ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ನಿರ್ಮಾಣ, ತಾಡಪಲ್ ವಿತರಣೆ, ಡಿಸೇಲ್ ಪಂ□□ಸೆಟ್ ಮತ್ತು ತುಂತುರು ನೀರಾವರಿ ಯೋಜನೆಗೆ ಪ್ರೋತ್ಸಾಹ ಧನ ಮತ್ತು ಸಹಾಯ ಧನ ನೀಡಲಾಗುತ್ತಿದೆ ಎಂದರು. ವಿಶ್ವ ಬ್ಯಾಂಕ್ ನೆರವಿನ ರಿವಾರ್ಡ್ ಯೋಜನೆಯಡಿ ತಾಲ್ಲೂಕಿನಲ್ಲಿ ಎಲ್.ಆರ್.ಐ ಅಧ್ಯಯನ ನಡೆಸಿದ ಪಾಂಡೋಮಟ್ಟಿ ಹೋಬಳಿ ವ್ಯಾಪ್ತಿಯಲ್ಲಿ 2 ಕಿರುಜಲಾನಯನಗಳನ್ನು ಉಪಚರಿಸಲು 6.83 ಕೋಟಿ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿದ್ದು ಕಾಮಗಾರಿ ಕೈಗೊಳ್ಳಲಾಗಿದೆ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು.



2023-24 ನೇ ಸಾಲಿನಲ್ಲಿ ಸೂಕ್ಷ್ಮ ನೀರಾವರಿ ಯೋಜನೆಯಡಿ ಎಲ್ಲಾ ವರ್ಗದ 2632 ರೈತರಿಗೆ ಶೇ 90ರ ರಿಯಾಯಿತಿಯಲ್ಲಿ ತುಂತುರು ನೀರಾವರಿ ಘಟಕಗಳನ್ನು ವಿತರಿಸಲಾಗಿದೆ.

ಜನೆಯಡಿ ಒಟ್ಟು 285 ಸಾಮಾನ್ಯ ವರ್ಗದ ರೈತರಿಗೆ (ಶೇ.50ರ ಸಹಾಯಧನ) ಹಾಗೂ 125 ಪ.ಜಾತಿ ಪ.ಪಂ ರೈತರಿಗೆ (ಶೇ.90ರ ಸಹಾಯಧನ)ದಲ್ಲಿ ಯಂತ್ರೋಪಕರಣಗಳನ್ನು ವಿತರಿಸಲಾಯಿತು. 2023-24 ನೇ ಸಾಲಿನಲಿ ಚನ್ನಗಿರಿ ತಾಲ್ಲೂಕು ಬರಪೀಡಿತ ಎಂದು ಘೋಷಣೆಯಾಗಿದ್ದು 16398 ಫಲಾನುಭವಿಗಳಿಗೆ 12.64 ಕೋಟಿ ರೂ ಪರಿಹಾರ ನೇರ ನಗದು ರೂಪದಲ್ಲಿ ರೈತರ ಬ್ಯಾಂಕ್ ಖಾತೆಗೆ ಪಾವತಿಯಾಗಿರುತ್ತದೆ.2023-24 ನೇ ಸಾಲಿನಲ್ಲಿ ಬೆಳೆ ವಿಮೆ ಮಾಡಿಸಿದ ಒಟ್ಟು 5482 ರೈತರಿಗೆ ಒಟ್ಟು 5.82 ಕೋಟಿ ಹಣ ಪಾವತಿಯಾಗಿರುತ್ತದೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಫಸಲ್ ಭೀಮಾ ಯೋಜನೆಯಡಿ 7737 ರೈತರು ನೋಂದಣಿಯಾಗಿರುತ್ತಾರೆ ಎಂದು ತಿಳಿಸಿದರು. ನಮ್ಮ ಸರ್ಕಾರ ರೈತರ ಹಿತ ಕಾಪಾಡಲು ಬದ್ಧವಿದೆ, ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳು ಸಹ ನೀಡಲಾಗುವುದು ಎಂದರು. ಜಂಟಿ ಕೃಷಿ ನಿರ್ದೇಶಕರಾದ ಶ್ರೀನಿವಾಸ್ ಚಿಂತಲ್, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಾದ ಅರುಣ್ ಕುಮಾರ್, ಕೃಷಿ ಅಧಿಕಾರಿ ರೈತ ಸಂಪರ್ಕ ಕೇಂದ್ರ ಸಂತೇಬೆನ್ನೂರು ಮೆಹತಾಬ್ ಅಲಿ ಹಾಗೂ ರೈತರು ಗ್ರಾಮದ ಮುಖಂಡರು ಮತ್ತು ಯುವ ಮುಖಂಡರಾದ ಗಿರೀಶ್ ಉಪಸ್ಥಿತರಿದ್ದರು.

### ಅಖಿಲಭಾರತವೀರಶೈವ ಮಹಾಸಭಾದ ಅಧ್ಯಕ್ಷರಾಗಿ ಡಿ.ಜೆ.ಕಿರಣ್‌ಶಂಕರ್ ಅವಿರೋಧ ಆಯ್ಕೆ



» **ಚಳ್ಳಕೆರೆ**

ಅಖಿಲಭಾರತವೀರಶೈವಮಹಾಸಭಾದನೂತನಪದಾಧಿಕಾರಿಗಳಆಯ್ಕೆ ಅವಿರೋಧವಾಗಿ ನಡೆದಿದ್ದು, ಚುನಾವಣಾಧಿಕಾರಿ ಗಂಗಾಧರ ನೂತನ ಪದಾಧಿಕಾರಿಗಳ ಆಯ್ಕೆಯನ್ನು ಹಾಜರಿದ್ದ ಸದಸ್ಯರ ಸಮ್ಮುಖದಲ್ಲಿ ಘೋಷಣೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಅಖಿಲಭಾರತವೀರಶೈವ ಮಹಾಸಭಾದ ಪದಾಧಿಕಾರಿಗಳ ಆಯ್ಕೆ ಕುರಿತಂತೆ ಚುನಾವಣೆ ನಡೆಯಬೇಕಿದ್ದು, ಆದರೆ, ಸಮಾಜದ ಎಲ್ಲಾ ಬಂಧುಗಳು ಸೇರಿ ಹಿರಿಯ ಮಾರ್ಗದರ್ಶನದಲ್ಲಿ ಸಂಘಟನೆಯನ್ನು ಬಲಪಡಿಸಲು ಅವಿರೋಧ ಆಯ್ಕೆ ಮೂಲಕ ಪದಾಧಿಕಾರಿಗಳ ಆಯ್ಕೆ ಮಾಡಿದ್ದು, ಮಹಾಸಭಾದ ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರು. ವೀರಶೈವ ಸಮಾಜದ ಹಿರಿಯ ಮುಖಂಡ ಡಾ.ಕೆ.ಎಂ.ಜಯಕುಮಾರ್, ಹಿರಿಯ ರಾಜಕಾರಣಿ ಟಿಎಟಿ ಪ್ರಭುದೇವ್, ವಾಣಿಜ್ಯೋದ್ಯಮಿ ಎಸ್.ರುದ್ರಮುನಿಯಪ್ಪ, ಬಿ.ಎಸ್.ಶಿವಪುತ್ರಪ್ಪ, ಕೆ.ಸಿ.ನಾಗರಾಜು, ಕೆ.ಎಂ.ಜಗದೀಶ್, ಪ್ರಸನ್ನಕುಮಾರ್ ಮುಂತಾದವರು ಸಭೆ ಸೇರಿ ಚರ್ಚಿಸಿ ನೂತನ ಪದಾಧಿಕಾರಿಗಳ ಆಯ್ಕೆ ಮಾಡಿ ಚುನಾವಣಾಧಿಕಾರಿಗಳಸಮಕ್ಷಮದಲ್ಲಿ ಘೋಷಿಸಿದರು.

ಅಧ್ಯಕ್ಷರಾಗಿ ಡಿ.ಜೆ.ಕಿರಣ್‌ಶಂಕರ್(ಡಿಎಂಟಿ), ಉಪಾಧ್ಯಕ್ಷರಾಗಿ ವಿ.ಮುರುಗೇಶ್,ಟಿ.ಜೆ.ರಾಜು,ಬಿ.ಎಂ.ಭಾಗ್ಯಮ್ಮ,ಪ್ರಧಾನ ಕಾರ್ಯದರ್ಶಿ ವಿ.ಮಂಜುನಾಥ, ಕಾರ್ಯದರ್ಶಿಗಳಾಗಿ ಬಿ.ಆರ್.ಶಿವಸ್ವಾಮಿ, ಸಿ.ಸಿದ್ದಾರ್ಥ, ಜಾನಕಿಮಂಜುನಾಥ, ಕೋಶಾಧ್ಯಕ್ಷರಾಗಿ ಎನ್.ರವಿಕುಮಾರ್ ಆಯ್ಕೆಯಾಗಿದ್ದಾರೆ.

## ಗಾಂಧಿ ಸ್ಮೃತಿ, ನವ ಜೀವನ ಸಮಿತಿ ಸದಸ್ಯರ ಅಭಿನಂದನಾ ಸಮಾರಂಭ

» **ಚಿತ್ರದುರ್ಗ**

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ಸಿರಿಗೆರೆ ಮತ್ತು ಚಿತ್ರದುರ್ಗ ತಾಲ್ಲೂಕು ಹಾಗೂ ಕರ್ನಾಟಕ ಜನಜಾಗೃತಿ ವೇದಿಕೆ ಟ್ರಸ್ಟ್ ವತಿಯಿಂದ ಭರಮಸಾಗರದ ಕನ್ನಿಕಾಪರಮೇಶ್ವರಿ ಕಲ್ಯಾಣ ಮಂಟಪದಲ್ಲಿ ಗಾಂಧಿ ಸ್ಮೃತಿ ಹಾಗೂ ನವ ಜೀವನ ಸಮಿತಿ ಸದಸ್ಯರ ಅಭಿನಂದನಾ ಸಮಾರಂಭ ನಡೆಯಿತು.

ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ಜಿಲ್ಲಾ ಉಪಾಧ್ಯಕ್ಷ ಕೆ.ಆರ್.ಮಂಜುನಾಥ್ ಸಮಾರಂಭ ಉದ್ಘಾಟಿಸಿ ಮಾತನಾಡುತ್ತ ಸತ್ಯ ಮತ್ತು ಅಹಿಂಸೆಯನ್ನು ಅಸ್ತ್ರವನ್ನಾಗಿ ಮಾಡಿಕೊಂಡು ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ಧ ಹೋರಾಡಿ ಮಹಾತ್ಮನೆನಿಸಿಕೊಂಡ ಗಾಂಧಿ ಜೀವನದಲ್ಲಿ ಎಂತಹ ಕಷ್ಟವೇ ಎದುರಾದರೂ ಸುಳ್ಳು ಹೇಳಲಿಲ್ಲ. ಸತ್ಯಹರಿಶ್ಚಂದ್ರ ನಾಟಕ ನೋಡಿ ಅವರ ಮನಃ ಪರಿವರ್ತನೆಯಾಯಿತು. ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗಡೆರವರು ಗಾಂಧಿ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ದುಶ್ಚಟಗಳ ವಿರುದ್ದ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿರುವುದರಿಂದ ಮದ್ಯವರ್ಜನ ಶಿಬಿರ, ಸ್ವಾಸ್ಥ್ಯ ಸಂಕಲ್ಪ, ತಂಬಾಕು ವಿರೋಧಿ ದಿನಾಚರಣೆಯನ್ನು ಪ್ರತಿ ವರ್ಷವೂ ಆಚರಿಸಿ ಮಾದಕ ವಸ್ತುಗಳಿಂದ ದೂರವಿರುವಂತೆ ಜನತೆಯಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು. ಯೋಜನೆಯ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ಮಾತನಾಡಿ ಹಳ್ಳಿಗಳ ಉದ್ದಾರದಿಂದ ಮಾತ್ರ ದೇಶ ಅಭಿವೃದ್ದಿಯಾಗಲು ಸಾಧ್ಯವೆಂದು ಮಹಾತ್ಮಗಾಂಧಿಜಿ ಕನಸು ಕಂಡಿದ್ದರು.



## ಕೆ.ಮಂಜುನಾಥ್‌ನಾಯ್ಕಗೆ ಡಾಕ್ಟರೇಟ್




» **ಚಿತ್ರದುರ್ಗ**

ಸಾಹಿತ್ಯ ಶಿಕ್ಷಣ ಸೇವಾ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ನಿವೃತ್ತ ಶಿಕ್ಷಕ ಕೆ.ಮಂಜುನಾಥ್‌ನಾಯ್ಕ ರವರಿಗೆ ಚೆನ್ನೈ ನಗರದ ರಾಮ್‌ಡ ಹೋಟೆಲ್‌ನಲ್ಲಿ ಸೌತ್ ವೆಸ್ಟ್ರನ್ ಅಮೇರಿಕನ್ ಯೂನಿವರ್ಸಿಟಿಯಿಂದ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಯಿತು.

**ಪ್ರಮುಖ ಸುದ್ದಿ**

# ಮನುಷ್ಯ ಶಿವಸ್ವರೂಪಿಯಾದಾಗ ಯಾವ ಅನಿಷ್ಟಗಳು ಬರುವುದಿಲ್ಲ

» **ಚಿತ್ರದುರ್ಗ**

ದಿನಾಂಕ:09.10.2024ರಂದುಅನುಭವ ಮಂಟಪದಲ್ಲಿ ಜಯದೇವ ಜಗದ್ಗುರುಗಳ ಜಯಂತ್ಯುತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಸಂಸದರಾದ ಶ್ರೀ ಗೋವಿಂದ ಎಂ ಕಾರಜೋಳರವರು ಮಾತನಾಡಿ ಮನುಷ್ಯ ಶಿವಸ್ವರೂಪಿಯಾದಾಗ ಯಾವ ಅನಿಷ್ಟಗಳು ಬರುವುದಿಲ್ಲ. 12ನೇ ಶತಮಾನದ ಶರಣರ ಸಂಸ್ಕೃತಿಯನ್ನು ಪ್ರಸ್ತುತಪಡಿಸುವುದೇ ಈ ಶರಣಸಂಸ್ಕೃತಿಯ ಉದ್ದೇಶವಾಗಿದೆ. ಕಾಯಕ ಜೀವಿಗಳಿಗೆ, ನೊಂದವರಿಗೆ ಮಾರ್ಗದರ್ಶನವಾಗಿದೆ. ವಿಶ್ವಗುರು ಬಸವಣ್ಣನವರು ಶೋಷಣೆ ತಪ್ಪಿಸಲಿಕ್ಕೆ, ಅಸಮಾನತೆ ನಿವಾರಣೆಗಾಗಿ, ಲಿಂಗಭೇದ ತೊಲಗಿಸಲು ಬಸವಧರ್ಮ ಸ್ಥಾಪಿಸಿದರು. ವೀರಶೈವ ಮಠಗಳು ಈ ನಾಡಿನ ಉದ್ಧಗಲಕ್ಕೂ ಎಲ್ಲಾ ಸಮಾಜಕ್ಕೂ ಅಕ್ಷರ ದಾಸೋಹ, ಅನ್ನ ದಾಸೋಹ ನೀಡಿವೆ. ಬಸವಣ್ಣನವರು ಹಾಕಿಕೊಟ್ಟ ಕಾರ್ಯಕ್ರಮಗಳನ್ನುಅನುಷ್ಠಾನಕ್ಕೆತರುವಲ್ಲಿ ಮುರುಘಾಮಠ ಮುಂಚೋಣಿಯಲ್ಲಿದೆ. ಬಸವಣ್ಣನವರ ಸುಂದರ ಸಮಾಜದ ಕಲ್ಪನೆಗೆ ಮತ್ತೆ ಮೆರಗು ನೀಡಬೇಕೆಂದರೆ ನಾಡಿನ ತಾಯಂದಿರು ಹುಟ್ಟುವ ಮಕ್ಕಳಿಗೆ ಬಸವತತ್ತ್ವ ಬೋಧನೆಯನ್ನು ಮಾಡಬೇಕು ಎಂದು ತಿಳಿಸಿದರು.



ನಿವೃತ್ತ ಐ.ಎ.ಎಸ್ ಅಧಿಕಾರಿಗಳಾದ ಡಾ.ಸೋಮಶೇಖರ್.ಸಿ, ಮಾತನಾಡಿ, ಜಯದೇವ ಮಹಾಸ್ವಾಮಿಗಳು ಮಾಡಿದ ಕಾಯಕ, ಲಿಂಗಾರ್ಚನೆ, ಗುರುಪೂಜೆ, ಜಂಗಮ ದಾಸೋಹಕ್ಕಾಗಿ ಶ್ರಮಿಸಿದವರು. ಅವರ ಪರಸೇವೆ ಲೋಕಾರ್ಪಿತವಾದದ್ದಾಗಿದೆ. ಮಹಾನ್ ವ್ಯಕ್ತಿಗಳು ಬರುವುದು ಲೋಕದ ಕಲ್ಯಾಣಕ್ಕೆ. ಜಯದೇವ ಶ್ರೀಗಳು ಕಾರಣಿಕ ಪುರುಷರಾಗಿ ಬಸವಣ್ಣನವರ ಅನುಯಾಯಿಗಳಾಗಿ ಅಕ್ಷರ ಅಕ್ಷರ ದಾಸೋಹ ನೀಡಿ ಮುಕ್ತಿಯ ಮಾರ್ಗ ತೋರಿದ್ದಾರೆ. ಲೋಕದಂತೆ ಬಂದವರಲ್ಲ. ಲೋಕದಂತೆ ಇದ್ದವರಲ್ಲ. ಸಮಾಜಕ್ಕೆ ದೊಡ್ಡ ದೊಡ್ಡ ಸಹಕಾರವನ್ನು ಮಾಡುತ್ತಾ ಬಂದಿದ್ದಾರೆ. ನಮ್ಮ ಜೀವನ ಶಾಶ್ವತವಲ್ಲ. ಸ್ವಂತಕ್ಕಾಗಿ ಬದುಕಬಾರದು. ಸ್ವಂತಕ್ಕೆ ಬದುಕುವವರು ಸತ್ತಂತೆ. ಪೀಠ ಎಂಬುದು ಸಮಾಜ ರಕ್ಷಣೆಗೆ ಸೀಮಿತವಾಗಿರಬೇಕೆಂದು ಮಠದ ಸಂಪತ್ತನ್ನು ಹಳ್ಳಿ ಹಳ್ಳಿಗೂ ಹೋಗಿ ಸಮಾಜಕ್ಕಾಗಿ ಬೇಡಿದ ವ್ಯಕ್ತಿ ಜಯದೇವ ಶ್ರೀಗಳು. ವೀರಶೈವ ಲಿಂಗಾಯತ ಮಠಗಳು ಸ್ಥಾಪಿಸಿದ ವಿದ್ಯಾರ್ಥಿನಿಲಯಗಳಲ್ಲಿ ಅನೇಕರು ವ್ಯಾಸಂಗ ಮಾಡಿ ಬದುಕನ್ನು ಕಟ್ಟಿಕೊಂಡಿದ್ದಾರೆ. ನಾನು ಸಹ ಜಯದೇವ ವಿದ್ಯಾರ್ಥಿನಿಲಯದಲ್ಲಿ ವಿದ್ಯಾಬ್ಯಾಸ ಮಾಡಿದವನು. 1937ರಲ್ಲಿ ಮಹಾರಾಜರು ಕೇಳಿಕೊಂಡಾಗ ರೋಗ ನಿರೋಧಕ ಔಷದಿಗಾಗಿ 40ಸಾವಿರ ರೂ ದೇಣಿಗೆ ನೀಡಿದಂತಹ ಮಹಾನ್ ವ್ಯಕ್ತಿ ಜಯದೇವ ಶ್ರೀಗಳು ಎಂದು ತಿಳಿಸಿದರು.

ಮಾಜಿ ಶಾಸಕರಾದ ಶ್ರೀ.ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ, ಹಿಂದಿನ ಅನುಭವಮಂಟಪದ ಆಧಾರದ ಮೇರೆಗೆ ಇಂದಿನ ಸಂಸತ್ತು ನಿರ್ಮಾಣವಾಗಿದೆ. ಅದಕ್ಕೆ ಬಸವಣ್ಣನವರೇ ಮೂಲ. ನಮ್ಮ ಸಮುದಾಯದ ಕಟ್ಟಡವನ್ನು ಕಟ್ಟಲು ಜಯದೇವ ಶ್ರೀಗಳು ಅಂದಿನ ಕಾಲದಲ್ಲೇ 1 ಸಾವಿರ ದೇಣಿಗೆಯನ್ನು ನೀಡಿದ್ದರು. ನಾನು ಚಿಕ್ಕವನಿದ್ದಾಗ ಪ್ರಾಥಮಿಕ ಶಾಲೆಯಲ್ಲಿ ಓದುತ್ತಿದ್ದಾಗಹೊರಸಂಚಾರಬರುತ್ತಿದ್ದುದು ನೆನಪಿದೆ ಎಂದು ಹೇಳಿದರು.

ಧಾರವಾಡ ಶ್ರೀ ಮುರುಘಾಮಠದ ಶ್ರೀ.ಮ.ನಿ.ಪ್ರ. ಮಲ್ಲಿಕಾರ್ಜುನ ಸ್ವಾಮಿಗಳು, ಬೆಂಗಳೂರು ಬೇಲಿಮಠದ ಶ್ರೀ ಶಿವರುದ್ರ ಸ್ವಾಮಿಗಳು, ಶ್ರೀ ಮಾದಾರ ಚೆನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು, ಎಸ್.ಜೆ.ಎಂ.ವಿದ್ಯಾಪೀಠದಆಡಳಿತಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿಗಳು, ಯೋಗಗುರು ವೈದ್ಯಶ್ರೀ ಶ್ರೀ ಚೆನ್ನಬಸವಣ್ಣ, ವಿಧಾನಪರಿಷತ್ ಸದಸ್ಯರಾದ ಶ್ರೀ ಕೆ.ಎಸ್.ನವೀನ್, ಶ್ರೀಮತಿ ದೇವಿಕುಮಾರಿ, ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾದ ಶ್ರೀ ಕೆ ಎಂ ವೀರೇಶ್ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಶ್ರೀ ಸೋಮಶೇಖರ್.ಸಿ, ನಿವೃತ್ತ ಐ.ಎ.ಎಸ್ ಅಧಿಕಾರಿಗಳು, ಜಯದೇವ ಹಾಸ್ಟೆಲ್ ಹಳೆಯ ವಿದ್ಯಾರ್ಥಿ ಬೆಂಗಳೂರು, ತುಮಕೂರಿನ ಶ್ರೀ ಜಯದೇವ ವಿದ್ಯಾರ್ಥಿ ನಿಲಯದ ಆಡಳಿತ ಮಂಡಳಿ ಸದಸ್ಯರುಗಳನ್ನು ಸನ್ಮಾನಿಸಲಾಯಿತು.

ಸಾಂಸ್ಕೃತಿಕ ಸಂಭ್ರಮದಲ್ಲಿ ಚಿತ್ರದುರ್ಗದ ಸರಿಗಮ ಸಂಗೀತ ಪಾಠಶಾಲೆಯ ಶ್ರೀ.ಸುಚಿತ್ ಕುಲಕರ್ಣಿ ಸಂಗೀತ, ಚಂದ್ರವಳ್ಳಿ ಎಸ್.ಜೆ.ಎಂ. ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯ ಮತ್ತು ಎಸ್.ಜೆ.ಎಂ.ರೆಸಿಡೆನ್ಶಿಯಲ್ ಶಾಲೆ ವತಿಯಿಂದ ನೃತ್ಯ ಕಾರ್ಯಕ್ರಮ ನಡೆಸಿಕೊಟ್ಟರು.

## ಶರಣ ಸಂಸ್ಕೃತಿ ಉತ್ಸವದಲ್ಲಿ ಇಂದು

- ಬೆಳಗ್ಗೆ 7.30 ಗಂಟೆಗೆ ಶಿವಯೋಗ ಪ್ರಾತ್ಯಕ್ಷಿಕೆ ಕಾರ್ಯಕ್ರಮವನ್ನು ಇಳಕಲ್ ವಿಜಯಮಹಾಂತೇಶ್ವರ ಮಠದ ನಿ.ಪ್ರ.ಸ್ವ. ಗುರುಮಹಾಂತ ಸ್ವಾಮಿಗಳು ನಡೆಸಿಕೊಡಲಿದ್ದು, ಅಗಡಿ-ಗುತ್ತಲ ಪ್ರಭುಸ್ವಾಮಿ ಮಠದ ಗುರುಸಿದ್ಧ ಸ್ವಾಮಿಗಳು, ಐರಣಿ ಮನೆ ಮಠದ ಶ್ರೀ ಗಜದಂಡ ಸ್ವಾಮಿಗಳು, ಅಸೂಟಿಯ ಶರಣೆ ನೀಲಲೋಚನೆ, ಬೀದರ್‌ನ ಶರಣೆ ವಚನ ಸಂಸ್ಕೃತಿ ಕಾರ್ಯಕ್ರಮದ ಸಮ್ಮುಖ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಬೀದರ್ ಬಸವಕೇಂದ್ರದ ಸುರೇಶ ಚೆನಶೆಟ್ಟಿ, ಮಾನವಿ ಬಸವ ಕೇಂದ್ರದ ಶರಣಬಸವ ನೀರಮಾನವಿ, ಸಿಂದಗಿ ಬಸವಕೇಂದ್ರದ ನಾನಾಗೌಡ ಪಾಟೀಲ, ಬೆಳಗಾವಿ ಕಿತ್ತೂರುರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ. ಎಂ.ಸಿ.ಯರಿಸ್ವಾಮಿ, ಚಿತ್ರದುರ್ಗ ಲಿಂಗಾಯತ ಸಮಾಜದ ಶ್ರೀಮತಿ ಉಮಾ ರಮೇಶ್, ಬೆಂಗಳೂರು ಕನ್ನಡಪರ ಹೋರಾಟಗಾರರಾದ ಪಾಲನೇತ್ರ ಆಗಮಿಸುವರು.
- ಬೆಳಗ್ಗೆ 10.30 ಗಂಟೆಗೆ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ವಿಚಾರ ಸಂಕಿರಣ-2ರ ಸಾನ್ನಿಧ್ಯವನ್ನು ಇಳಕಲ್ ಶ್ರೀ ವಿಜಯ ಮಹಾಂತೇಶ್ವರ ಮಠದ ನಿ.ಪ್ರ.ಸ್ವ. ಗುರುಮಹಾಂತ ಸ್ವಾಮಿಗಳು ವಹಿಸಲಿದ್ದು, ಅಧ್ಯಕ್ಷತೆಯನ್ನು ಧಾರವಾಡದ ಸಾಹಿತಿ ಡಾ. ಎಸ್.ಆರ್.ಗುಂಜಾಳ ವಹಿಸಲಿದ್ದು, ಜಯದೇವ ಜಗದ್ಗುರುಗಳ ವಿದ್ವತ್ತು ಮತ್ತು ಸಂಸ್ಕೃತ ಪ್ರೇಮ ಕುರಿತು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ.ಮಲ್ಲೇಪುರಂ ಜಿ.ವೆಂಕಟೇಶ್, ಜಯದೇವ ಜಗದ್ಗುರುಗಳು ಮತ್ತು ಅಡ್ಡಪಲ್ಲಕ್ಕಿ ಕುರಿತು ಹಿರಿಯ ಪತ್ರಕರ್ತರಾದ ಶ್ರೀ ಜಿ.ಎಸ್. ಉಜ್ಜಿನಪ್ಪ, ಜಯದೇವ ಜಗದ್ಗುರುಗಳು ಮತ್ತು ಸಮಕಾಲೀನರು ಕುರಿತು ಜಾನಪದ ವಿದ್ವಾಂಸರು ಹಾಗೂ ನಿವೃತ್ತ ಪ್ರಾಧ್ಯಾಪಕರಾದ ಡಾ.ಮೀರಾಸಾಬಿಹಳ್ಳಿ ಶಿವಣ್ಣ, ಜಯದೇವ ಜಗದ್ಗುರುಗಳ ಸಾಮಾಜಿಕ ಸೇವೆ ಕುರಿತು ವೈದ್ಯರು ಮತ್ತು ಸಾಹಿತಿಗಳಾದ ಡಾ.ಬಿ.ನಂಜುಂಡಸ್ವಾಮಿ ವಿಷಯ ಮಂಡನೆ ಮಾಡಲಿದ್ದಾರೆ.
- ಸಂಜೆ 6 ಗಂಟೆಗೆ ಅನುಭವಮಂಟಪದಲ್ಲಿ ಜಯದೇವ ಜಗದ್ಗುರುಗಳ ಜಯಂತ್ಯುತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಬೆಂಗಳೂರು ನಿಡುಮಾಮಿಡಿ ಮಠದ ಡಾ.ವೀರಭದ್ರ ಚನ್ನಮಲ್ಲ ದೇಶಿಕೇಂದ್ರ ಸ್ವಾಮಿಗಳು, ಬೆಂಗಳೂರು ಬೇಲಿಮಠದ ಶ್ರೀ ಮ.ನಿ.ಪ್ರ. ಶಿವರುದ್ರಸ್ವಾಮಿಗಳು, ಭಾಲ್ಕಿ ಹಿರೇಮಠದ ಡಾ.ಮ.ಘ.ಚ.ಬಸವಲಿಂಗ ಪಟ್ಟದ್ದೇವರು ವಹಿಸಲಿದ್ದು, 'ಜಯದೇವ ದಿಗ್ವಿಜಯ' ಸಂಸ್ಮರಣ ಸಂಪುಟವನ್ನು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಿಡುಗಡೆ ಮಾಡುವರು.
- ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕರಾದ ಶ್ರೀ ಕೆ.ಸಿ.ವೀರೇಂದ್ರ ವಹಿಸುವರು. ಮುಖ್ಯ ಅತಿಥಿಗಳಾಗಿ ಉಪ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ.ಶಿವಕುಮಾರ್, ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಜವಳಿ ಮತ್ತು ಸಕ್ಕರೆ, ಕೃಷಿ ಮಾರುಕಟ್ಟೆ ಸಚಿವರಾದ ಶ್ರೀ ಶಿವಾನಂದ ಎಸ್ ಪಾಟೀಲ್, ಮಾಜಿ ಸಂಸದರು ಹಾಗೂ ವಾಣಿಜ್ಯೋದ್ಯಮಿಗಳಾದ ಶ್ರೀ ವಿಜಯ ಸಂಕೇಶ್ವರ, ವೀರಶೈವ ಲಿಂಗಾಯತ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಶ್ರೀ ವಿಜಯಾನಂದ ಕಾಶಪ್ಪನವರ್, ಎಸ್.ಜೆ.ಎಂ.ಮಠ ಹಾಗೂ ಎಸ್.ಜೆ.ಎಂ.ವಿದ್ಯಾಪೀಠದ ಅಧ್ಯಕ್ಷರಾದ ಶ್ರೀ ಶಿವಯೋಗಿ ಸಿ.ಕಳಸದ, ನಿ.ಐ.ಎ.ಎಸ್., ಚನ್ನಗಿರಿ ಶಾಸಕರಾದ ಶ್ರೀ ಬಸವರಾಜು ವಿ ಶಿವಗಂಗಾ, ಬೀದರ್ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷರಾದ ಶ್ರೀ ಬಸವರಾಜ್ ಧನ್ನೂರು ಆಗಮಿಸಲಿದ್ದು, ಕಾರ್ಯಕ್ರಮದಲ್ಲಿ ತಿಪಟೂರಿನ ಶ್ರೀ ಜಯದೇವ ವಿದ್ಯಾರ್ಥಿನಿಲಯದ ಆಡಳಿತಮಂಡಳಿ ಸದಸ್ಯರು ಉಪಸ್ಥಿತರಿರುವರು.
- ಕಾರ್ಯಕ್ರಮದಲ್ಲಿ ಮಹಾದಾನಿಗಳಾದ ಅಂಬಲಿ ಚನ್ನಬಸಪ್ಪನವರ ಸುಪುತ್ರರಾದ ಶ್ರೀ ಎ.ಸಿ.ಷಡಕ್ಷರಿ, ಮಾಜಿ ಶಾಸಕರಾದ ಶ್ರೀ ಯಜಮಾನ್ ಮೋತಿ ವೀರಣ್ಣ, ನಿವೃತ್ತ ಇಂಜಿನಿಯರ್ ಶ್ರೀ ಚನ್ನವೀರಪ್ಪ ಎಸ್, ನಿಕಟಪೂರ್ವ ಸರ್ಕಾರಿ ಅಭಿಯಂತರರು ಹಾಗೂ ಹಿರಿಯ ವಕೀಲರಾದ ಶ್ರೀ ಎಚ್. ಎಸ್.ಚಂದ್ರಮೌಳಿ, ಜಯದೇವ ಪ್ರೆಸ್ ಮಾಲೀಕರಾದ ಶ್ರೀ ಕಣಕುಪ್ಪಿ ಮುರುಘೇಶಪ್ಪ, ದಾವಣಗೆರೆ ವರ್ತಕರಾದ ಶ್ರೀ ಮುರುಘರಾಜೇಂದ್ರ ಚಿಗಟೇರಿ ಇವರುಗಳನ್ನು ಸನ್ಮಾನಿಸಲಾಗುವುದು. ಸಾಂಸ್ಕೃತಿಕ ಸಂಭ್ರಮದಲ್ಲಿ ಖ್ಯಾತ ಹಿನ್ನಲೆ ಗಾಯಕರಾದ ಶ್ರೀ ರಾಜೇಶ್ ಕೃಷ್ಣನ್ ಮತ್ತು ತಂಡದ ವರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ.

ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವ: ಶರಣ ಸಂಸ್ಕೃತಿ ಉತ್ಸವ 2024

# ಜಯದೇವ ಜಗದ್ಗುರುಗಳ ಸಂಸ್ಮರಣ 1200 ಪುಟಗಳ ಜಯದೇವ ದಿಗ್ವಿಜಯ ಪುಸ್ತಕ ಬಿಡುಗಡೆ

» ಚಿತ್ರದುರ್ಗ

ದಿನಾಂಕ:08.10.2024ರಂದು ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವ ಹಾಗೂ ಶರಣಸಂಸ್ಕೃತಿ ಉತ್ಸವ–2024ರ ನಿಮಿತ್ತ ಶ್ರೀಮಠದ ಅನುಭವ ಮಂಟಪದಲ್ಲಿ ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವದ ಕಾರ್ಯಕ್ರಮವನ್ನು ಅಯೋಜಿಸಲಾಗಿತ್ತು.




ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಸಾಣೇಹಳ್ಳಿ ಶ್ರೀ ತರಳಬಾಳು ಬೃಹನ್ಮಠ ಶಾಖಾಮಠದ ಡಾ.ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಯಾರು ಸತ್ಯ ದಾರಿಯಲ್ಲಿ ನಡೆದು ಸರ್ವರನ್ನು ಪ್ರೀತಿಸುವರೋ ಅವರೇ ಶ್ರೀಮಂತರು. ಜಯದೇವ ಗುರುಗಳಿಂದ ಉಪಕೃತರಾದ ಸಹಸ್ರಾರು ಮಂದಿ ತಮ್ಮದೇ ಆದ ಬದುಕನ್ನು ಕಟ್ಟಿಕೊಂಡಿದ್ದಾರೆ.ಶ್ರೀಗಳುಜನರಏಳಿಗೆಗಾಗಿ ಏನು ಮಾಡಬೇಕೆಂದು ಯೋಚಿಸಿ ರಾಜ್ಯದ್ಯಾಂತ ವಿದ್ಯಾರ್ಥಿ ನಿಲಯಗಳನ್ನು ತೆರೆದು ಸಹಕಾರಿಯಾಗಿದ್ದಾರೆ. ಕರ್ನಾಟಕದಲ್ಲಿ ಮಠ–ಪೀಠಗಳಿಲ್ಲದಿದ್ದರೆ ನಮ್ಮ ನಿಮ್ಮ ಜೀವನ ಹೇಗಿರುತ್ತಿತ್ತು ಯೋಚಿಸಿ. ಭಕ್ತರಿಗೆ ಅಂಜುವ ಗುರು, ಗುರುವಿಗೆ ಅಂಜುವ ಶಿಷ್ಯರಿರಬೇಕು ಎಂಬುದನ್ನು ಶಿವಕುಮಾರ ಸ್ವಾಮಿಗಳು ಹೇಳಿದ್ದರು. ಇಂದು ಸಮಾಜ ಶೈಕ್ಷಣಿಕ, ಸಾಮಾಜಿಕ, ಆರ್ಥಿಕವಾಗಿ ಬೆಳೆದಿದೆ. ಆದರೆ ನೈತಿಕತೆ ಕಡಿಮೆಯಾಗುತ್ತಿದೆ. ಆದ್ದರಿಂದಲೇ ಪುರಾತನ ಪರಂಪರೆಯನ್ನು ನೆನೆಯುತ್ತೇವೆ. ಶ್ರೀಗಳು ತಮ್ಮನ್ನು ತಾವು ಸಮರ್ಪಿಸಿದವರಾಗಿದ್ದಾರೆ. ಓದು ವ್ಯಕ್ತಿತ್ವವನ್ನು ವಿಕಸನಗೊಳಿಸುತ್ತದೆ. ಹಿಂದಿನ ಗುರುಗಳಿಗೆ ನಿಷ್ಠೆ ಮತ್ತು ನಿಷ್ಠುರತೆ ಇತ್ತು. ಅವುಗಳನ್ನು ಅಳವಡಿಸಿದಾಗ ತತ್ತ್ವ ಸಿದ್ಧಾಂತಗಳು ಉಳಿಯುತ್ತವೆ. ನಮ್ಮ ಬುದ್ಧಿಯನ್ನು ಬೇರೆಯವರ ಕೈಗೆ ಕೊಡದೆ ಬದುಕಿದರೆ ಅನಿಷ್ಟಗಳನ್ನು ನಿರ್ಭಂಧಿಸಬಹುದು. ಜಯದೇವ ಶ್ರೀಗಳು ಹಣ ಗಳಿಸಲಿಲ್ಲ. ಜನರನ್ನು ಗಳಿಸಿದರು. ಮಠದ ನಿಜವಾದ ಆಸ್ತಿ ಭಕ್ತರು. ಭಕ್ತರೇ ಮಠದ ಶಕ್ತಿಯೆಂದು ನುಡಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ವಹಿಸಿದ್ದ ನಿಡಸೂಸಿ ಶ್ರೀ ದುರದುಂಡೇಶ್ವರ ಸಿದ್ಧ ಸಂಸ್ಥಾನಮಠದ ಶ್ರೀ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು ಮಾತನಾಡಿ, ಹಿಂದಿನ ಹೆಜ್ಜೆಯನ್ನು ಅರಿಯಬೇಕೆಂದು ಅಲ್ಲಮ ಪ್ರಭುಗಳು ಹೇಳಿದ್ದಾರೆ. ಅಂದಿನ ಕಾಲದಲ್ಲಿ ಒಂದು ಹೊತ್ತಿನ ಊಟಕ್ಕೂ ಬರವಿತ್ತು. ಅಂದಿನ ಸ್ಥಿತಿ ನೋಡಿದ್ದ ಪೂಜ್ಯರು ಸಮಾಜ ಮತ್ತು ದೇಶದ ಕಡೆ ಲಕ್ಷ್ಯ ಕೊಟ್ಟರು. ಅದರಿಂದ ಶಿಕ್ಷಣ ಎಲ್ಲರಿಗೂ ಸಿಗುತ್ತಾ ಬಂದಿದೆ. ಮಣ್ಣಲ್ಲಿ ಮಡಗಿ, ಕಣ್ಣಲ್ಲೆ ನೋಡಿ ಉಣ್ಣದೇ ಹೋಗುವಿರಾ? ಎಂಬುದನ್ನು ಜಯದೇವ ಗುರುಗಳು ಅರಿತು ಅನೇಕರಿಗೆ ಶಿಕ್ಷಣ ನೀಡುತ್ತಾ ಬಂದಿದ್ದರು. ಅನೇಕ ವಿದ್ಯಾರ್ಥಿನಿಲಯಗಳನ್ನು ಕಟ್ಟಿದ್ದರು. ಕೊಡಗಿನಿಂದ ಕೊಲ್ಲಾಪುರದವರೆಗೆ ಆಸ್ತಿ ಮಾಡಿದರು. ಸಾಮಾಜಿಕ ಕಳಕಳಿಯಿಂದ ತಮ್ಮ ಆಸ್ತಿಯನ್ನು ದಾನ ಮಾಡಿದ ವ್ಯಕ್ತಿಗಳನ್ನು ಕಾಣಬಹುದು. ಎಲ್ಲಾ ಸಮಾಜಕ್ಕು ಶಿಕ್ಷಣ ದೊರೆತರೆ ದೇಶ ಪ್ರಗತಿ ಕಾಣುತ್ತದೆ. ಅದಕ್ಕೆ ಅನೇಕ ಸ್ವಾಮೀಜಿಗಳು, ವ್ಯಕ್ತಿಗಳು ಶಿಕ್ಷಣಕ್ಕೆ ಒತ್ತು ನೀಡಿರುವುದನ್ನು ನಾವು ಕಾಣಬಹುದು. ದೇಶವೇ ನೆನಪಿಸಿಕೊಳ್ಳುವಂತಹ ಮಾರ್ಗದರ್ಶನ ನೀಡಿದವರೆಂದರೆ ಜಯದೇವ ಶ್ರೀಗಳು. ಮನೆಯೇ ಗ್ರಂಥಾಲಯ, ಮಂತ್ರಾಲಯ ಮತ್ತು ದೇವಾಲಯವಾಗಬೇಕಿದೆ. ಒಂದು ಒಳ್ಳೆಯ ಪುಸ್ತಕ ಓದುವುದರಿಂದ ಚೈತನ್ಯದ ಜೊತೆ ನೆಮ್ಮದಿ ದೊರೆಯುವುದು ಎಂದು ತಿಳಿಸಿದರು.

ಭಾಲ್ಕಿಯ ಶ್ರೀ ಸಿದ್ಧರಾಮ ಪಟ್ಟದ್ದೇವರು ಮಾತನಾಡಿ, ಬಸವಣ್ಣನವರು 12ನೇ ಶತಮಾನದಲ್ಲಿ ಕೀಳರಿಮೆ, ಜಾತಿ ಭೇದ ತೊಡೆದು ಹಾಕಿ ಎಲ್ಲಾ ಕ್ಷೇತ್ರಗಳಿಗೂ ನ್ಯಾಯ ದೊರೆಕಿಸಿದವರು. ಕಲ್ಯಾಣ ರಾಜ್ಯ ಎಂದರೆ ಬೇಡದವರಿಲ್ಲದ ಕಾರಣ ನಾನು ಬಡವನಾದೆ ಎಂಬಂತೆ ಶರಣ ಸತ್ಯಕ್ಕನವರು ಒಮ್ಮೆ ಕಸ ಗೂಡಿಸುವಾಗ ಕೆಲವರು ಬಂಗಾರದ ನಾಣ್ಯಗಳನ್ನು ಹಾಕುತ್ತಾರೆ. ಆದರೆ ಸತ್ಯಕ್ಕ ಕಸದ ಜೊತೆ ಅದನ್ನು ತೆಗೆದು ಕಸದಬುಟ್ಟಿಯಲ್ಲಿ ಹಾಕುತ್ತಾರೆ. ಏಕೆ ಎಂದು ಕೇಳಿದ್ದಕ್ಕೆ ಸತ್ಯಕ್ಕ ಅದು ನನಗೆ ಕಸದ ರೂಪದಲ್ಲಿ ಕಾಣುತ್ತಿದೆ ಎಂದರು. ಇದು ಬಸವಣ್ಣನವರು ಸಮಾಜಕ್ಕೆ ಯಾವ ರೀತಿ ಮಾರ್ಗದರ್ಶನ ನೀಡಿದ್ದರು ಎಂಬುದನ್ನು ನಾವು ಕಾಣಬಹುದು. ಜಯದೇವ ಜಗದ್ಗುರುಗಳು ಶಿಕ್ಷಣ, ದಾಸೋಹ, ಆರೋಗ್ಯ ಸೇವೆಯನ್ನು ನೀಡುತ್ತಾ ಬಂದರು. ಅವರು ಸರ್ವ ಕ್ಷೇತ್ರದಲ್ಲೂ ತಮ್ಮದೇ ಆದ ಛಾಪನ್ನು ಮೂಡಿಸಿದ್ದಾರೆ ಎಂದು ನುಡಿದರು.

ಸಾಹಿತಿ ಶ್ರೀ ಎಸ್.ಆರ್ ಗುಂಜಾಳ್ ಮಾತನಾಡಿ, ನಾನು ಧಾರವಾಡ ಮುರುಘಾಮಠದಲ್ಲಿ ಪ್ರಸಾದವನ್ನು ಸ್ವೀಕರಿಸಿ ಓದಿ ಬೆಳೆದೆ. ನಾನು 12000 ಗ್ರಂಥಗಳನ್ನು ಲಿಂಗಾಯತ ಧರ್ಮದ ಕುರಿತು ವಿಚಾರವನ್ನು ವಿವಿಧ ಭಾಷೆಗಳಿಂದ ತಿಳಿದು ಲಿಂಗಯತ ಧರ್ಮದ ಬಗ್ಗೆ ಬೃಹತ್ ಗ್ರಂಥವನ್ನು ರಚಿಸಿದ್ದೇನೆ. ರಾಜ್ಯೋತ್ಸವ ಪ್ರಶಸ್ತಿ ಸಹ ದೊರೆತಿದೆ. ನನಗೂ ಶ್ರೀಮಠಕ್ಕೂ ಅವಿನಾಭಾವ ಸಂಬಂಧವಿದೆ. 12ನೇ ಶತಮಾನದ ಅನುಭವ ಮಂಟಪದಂತಹ ಅನುಭವ ಮಂಟಪ ಶ್ರೀಮಠದಲ್ಲಿರುವುದು ಅಭಿನಂದನಾರ್ಹ ಎಂದು ನುಡಿದರು.

ಎನ್‌ಜಿಇಎಫ್ ಲಿ. ನಿವೃತ್ತಜನರಲ್ ಮ್ಯಾನೇಜರ್ ಶ್ರೀ ಎನ್ ಟಿ ಸಿದ್ಧರಾಮಣ್ಣನವರ್ ಮಾತನಾಡಿ, ನಾನು ಜಯದೇವ ಮುರುಘರಾಜೇಂದ್ರ ಸ್ವಾಮೀಜಿಗಳ ಹಾಸ್ಟೆಲ್ ಸೇರಿದಾಗ ಶ್ರೀಗಳ ಮೊದಲನೇ ವರ್ಷದ ಪುಣ್ಯಸ್ಮರಣೆಯಾಗಿತ್ತು. ಶ್ರೀಗಳು ವಿದ್ಯಾರ್ಥಿ ನಿಲಯ ಹಾಗೂ ಪ್ರಸಾದ ನಿಲಯಗಳನ್ನು ಸ್ಥಾಪಿಸಿ ನನ್ನಂತಹ ಅನೇಕರಿಗೆ ಆಶ್ರಯ ಕಲ್ಪಿಸಿಕೊಟ್ಟಿದ್ದರು. ಇದರಿಂದ ನಾನು ಪ್ರೇರೇಪಿತನಾಗಿ ಮುಂದೆ ಉನ್ನತ ವ್ಯಾಸಂಗವನ್ನು ಮಾಡಿ ರ‍್ಯಾಂಕ್ ಪಡೆದು ಜರ್ಮನಿಯಲ್ಲಿ ಕೆಲಸ ಮಾಡಿ ಬಂದಿದ್ದೇನೆ. ಬೆಂಗಳೂರಿನಲ್ಲಿ ಶ್ರೀ ಜಯದೇವ ಶ್ರೀಗಳ ಹೆಸರಿನಲ್ಲಿ ಸಾವಿರಾರು ಮಕ್ಕಳಿಗಾಗಿ ಹಾಸ್ಟೆಲ್ ನಡೆಸುತ್ತಿದ್ದೇನೆ. ಮಕ್ಕಳಿಗಾಗಿ ಆಸ್ತಿ ಮಾಡಬೇಡಿ. ಮಕ್ಕಳನ್ನೇ ದೇಶದ ಆಸ್ತಿ ಮಾಡಿ ಎಂದು ನುಡಿದರು.

ಎಸ್.ಜೆ. ಎಂ.ವಿದ್ಯಾಪೀಠದ ಆಡಳಿತಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿಗಳು, ರಾವಂದೂರಿನ ಶ್ರೀ ಮ.ನಿ.ಪ್ರ. ಮೋಕ್ಷಪತಿ ಸ್ವಾಮಿಗಳು,ಡಾ.ಷಡಕ್ಷರಿಮಹಾಸ್ವಾಮಿಗಳು, ಶ್ರೀ ಜಯಬಸವಾನಂದ ಸ್ವಾಮಿಗಳು, ಶ್ರೀ ಇಮ್ಮಡಿ ಷಡಕ್ಷರ ಸ್ವಾಮಿಗಳು, ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು, ಯೋಗಗುರು ವೈದ್ಯಶ್ರೀ ಶ್ರೀ ಚೆನ್ನಬಸವಣ್ಣ, ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿಯ ಅಧ್ಯಕ್ಷರಾದ ಶ್ರೀ ಶಿವಯೋಗಿ ಸಿ ಕಳಸದ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಜಯದೇವ ವಿದ್ಯಾರ್ಥಿನಿಲಯದ ಹಳೆಯ ವಿದ್ಯಾರ್ಥಿ ಎನ್‌ಜಿಇಎಫ್ ಲಿ. ನಿವೃತ್ತ ಜನರಲ್ ಮ್ಯಾನೇಜರ್ ಶ್ರೀ ಎನ್ ಟಿ ಸಿದ್ಧರಾಮಣ್ಣನವರ್, ಬೆಂಗಳೂರು ಶ್ರೀ ಜಯದೇವ ವಿದ್ಯಾರ್ಥಿನಿಲಯದ ಆಡಳಿತಮಂಡಳಿ ಸದಸ್ಯರುಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗಣ್ಯರು ಜಯದೇವ ಜಗದ್ಗುರುಗಳ ಸಂಸ್ಮರಣ 1200 ಪುಟಗಳ "ಜಯದೇವ ದಿಗ್ವಿಜಯ" ಪುಸ್ತಕವನ್ನು ಬಿಡುಗಡೆ ಮಾಡಿದರು. ಪುಸ್ತಕದ ಗೌರವ ಸಂಪಾದಕರು ಶ್ರೀ ಶಿವಯೋಗಿ ಸಿ ಕಳಸದ ಹಾಗೂ ಡಾ.ಬಸವಕುಮಾರ ಸ್ವಾಮೀಜಿಗಳು, ಪ್ರಧಾನ ಸಂಪಾದಕರು ಡಾ.ಬೈರಮಂಗಲ ರಾಮೇಗೌಡರು ಹಾಗೂ ಸಂಪಾದಕರು ಸ್ವಾನ್ ಕೃಷ್ಣ ಮೂರ್ತಿ.

ಸಮಾರಂಭದಲ್ಲಿ ಜಮುರಾ ಕಲಾವಿದರು ಪ್ರಾರ್ಥಿಸಿ, ಶ್ರೀ ಮಲ್ಲಿಕಾರ್ಜುನ ಸ್ವಾಮಿಗಳು ಸ್ವಾಗತಿಸಿ, ಜ್ಞಾನಮೂರ್ತಿ ಟಿ ಪಿ ಮತ್ತು ನೇತ್ರಾವತಿ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ಬಾಪೂಜಿ ವಿದ್ಯಾ ಸಂಸ್ಥೆಯ ವಿದ್ಯಾರ್ಥಿಗಳು, ರಂಗಭಂಡಾರ ಕಲಾ ತಂಡದವರು ನೃತ್ಯ ಪ್ರದರ್ಶನ, ಜೀಕನ್ನಡ ಟಿವಿ ಹೆಸರಾಂತಕಲಾವಿದರಾದ ಸುಪ್ರೀತ್ ಫಾಲ್ಗುಣ, ಶರದ್ಧಿ ಪಾಟೀಲ್ ಮತ್ತು ಡಾ.ಶ್ರಾವ್ಯರವರಿಂದ ಸಂಗೀತ ಕಾರ್ಯಕ್ರಮ ಹಾಗೂ ಕೆ.ಜಿ.ಎಫ್. ಚಲನಚಿತ್ರ ಖ್ಯಾತಿಯ ಮೋಹನ್ ಮಾಸ್ಟರ್ ತಂಡದವರು ನೃತ್ಯ ಪ್ರದರ್ಶನ ನೀಡಿದರು.



ಚಳ್ಳಕೆರೆ ನಗರದ ವೀರಭದ್ರೇಶ್ವರ ಪಿರಮಿಡ್ ಕೇಂದ್ರದಲ್ಲಿ ದಸರಾಹಬ್ಬದ ಪ್ರಯುಕ್ತ ವಿಶೇಷ ಧ್ಯಾನ ಕಾರ್ಯಕ್ರಮವನ್ನು ನಡೆಸಲಾಯಿತು. ಎ.ಸಿ.ನಾಗೇಂದ್ರನ್, ಸುಧಾಕರ, ಗೋವಿಂದರಾಜು, ಸಿದ್ದಮ್ಮ, ಜಗದೀಶ್ವರ್‌ಚಾರಿ, ದ್ರಾಕ್ಷಾಯಿಣಿ, ವಿಜಯಕುಮಾರ್, ಸುರೇಖಾ ಮುಂತಾದವರುಪಾಲ್ಗೊಂಡಿದ್ದರು.

## ಕ್ರೀಡಾ ವಸತಿ ನಿಲಯದ ಖೋ-ಖೋ ತಂಡಕ್ಕೆ ದ್ವಿತೀಯ ಸ್ಥಾನ



» ದಾವಣಗೆರೆ

ಬಿಜಾಪುರ ಜಿಲ್ಲೆಯ ತಾಂಬಾದಲ್ಲಿ ಅಕ್ಟೋಬರ್ 5 ಮತ್ತು 6 ರಂದು ನಡೆದ ರಾಜ್ಯ ಮಟ್ಟದ ಆಹ್ವಾನಿತ ಖೋ–ಖೋ ಪಂದ್ಯಾವಳಿಯಲ್ಲಿ ನಗರದ ಕ್ರೀಡಾ ವಸತಿ ನಿಲಯದ ಪುರುಷರ ತಂಡವು ದ್ವಿತೀಯ ಸ್ಥಾನ ಪಡೆದಿರುತ್ತದೆ. ತಂಡದಿಂದ ವಿಜಯ್, ಹುಲಗಪ್ಪ, ನಿಖಿಲ್, ವಿರೇಶ್, ರವಿಕುಮಾರ್, ಭೀಮಪ್ಪ, ಪ್ರದೀಪ್, ಮಲ್ಲಿಕಾರ್ಜುನ, ಯಮನಪ್ಪ, ಪ್ರಜ್ವಲ್, ಪುನೀತ್, ದಿಲೀಪ್ ಇವರುಗಳು ಉತ್ತಮ ಪ್ರದರ್ಶನ ನೀಡಿದ್ದು, ಕ್ರೀಡಾಪಟುಗಳು ಇಲಾಖೆಯ ತರಬೇತುದಾರರಾದ ರಾಮಲಿಂಗಪ್ಪ.ಜೆ, ಇವರಿಂದ ತರಬೇತಿ ಪಡೆದಿರುತ್ತಾರೆ.

ಪ್ರಮುಖ ಸುದ್ದಿ

# ಅಕ್ಕನ ವಚನ ಅದು ನಿರ್ವಚನ: ಡಾ.ಬಸವಪ್ರಭು ಸ್ವಾಮೀಜಿ

» ಚಿತ್ರದುರ್ಗ

ವೈರಾಗ್ಯ ನಿಧಿಯಾದ ಅಕ್ಕಮಹಾದೇವಿಯವರು ಲೋಕದ ಚೇಷ್ಠೆಗೆ ರವಿ ಬೀಜವಾದಂತೆ ಕರಣಂಗಳ ಚೇಷ್ಠೆಗೆ ಮನವೇ ಬೀಜ. ಸೂರ್ಯೋದಯ ಅಗುತ್ತಲೇ ಜಗತ್ತಿನ ಚಟುವಟಿಕೆಗಳು ಪ್ರಾರಂಭವಾಗುತ್ತವೆ. ಹಾಗೇಯೆ ಮಾನವನಲ್ಲಿ ಕರಣಂಗಳ ಚೇಷ್ಠೆಗೆ ಮನವೇ ಬೀಜ ಎಂದಿದ್ದಾರೆ ಎಂದು ದಾವಣಗೆರೆಯ ವಿರಕ್ತಮಠದ ಡಾ.ಬಸವಪ್ರಭು ಸ್ವಾಮೀಜಿ ತಿಳಿಸಿದರು.



ಅನುಭವ ಮಂಟಪದಲ್ಲಿ ಶಿವಯೋಗದ ಪ್ರಾತ್ಯಕ್ಷಿಕೆವಹಿಸಿ ಮಾತನಾಡಿದ ಅವರು, ಅಕ್ಕನ ವಚನ ಅದು ನಿರ್ವಚನ ಎಂದು ಚನ್ನಬಸವಣ್ಣನವರು ಹೇಳಿದ್ದಾರೆ. ಮಾನವನ ಮನಸ್ಸು ಕರಣಂಗಳ ಚೇಷ್ಠೆಗೆ ಕಾರಣವಾಗಿದೆ. ಹಾಗಾಗಿ ಮನಸ್ಸನ್ನು ನಾವು ಗೆಲ್ಲಬೇಕು. ಮನಸ್ಸಿನ ಗುಣ ಚಂಚಲತೆ, ಮನಸ್ಸಿನ ಇನ್ನೊಂದು ಗುಣ ಚಪಲತೆ ಚಪಲ ಎಂದರೆ ಬೇಕು ಎನ್ನುವುದು. ನಾವು ಯಾವುದು ಬೇಡ ಎಂದುಕೊಳ್ಳುತ್ತೇವೆಯೋ ಅದು ಬೇಕು ಎನ್ನುತ್ತದೆ ಎಂದರು.

ಅದೇ ಚಪಲತೆ ಇಂತಹ ಮನಸ್ಸನ್ನು ನಿಯಂತ್ರಣ ಮಾಡಬೇಕು, ಇದನ್ನು ಕಟ್ಟಿ ಹಾಕಲು 12 ನೇ ಶತಮಾನದ ಬಸವಣ್ಣನವರು ಇಷ್ಟಲಿಂಗ ನೀಡಿದರು. ಯಾರೂ ಇಷ್ಟಲಿಂಗವನ್ನು ಇಟ್ಟುಕೊಂಡು ದೃಷ್ಟಿದ್ಯಾನ ಮಾಡುತ್ತಾರೋ ಅವರ ಮನಸ್ಸು ಹೇಳಿದಂತೆ ಕೇಳುತ್ತದೆ. ಮನಸ್ಸು ಹೇಳಿದಂತೆ ನಾವು ಕೇಳಬಾರದು, ನಾವು ಹೇಳಿದಂತೆ ನಮ್ಮ ಮನಸ್ಸು ಕೇಳಬೇಕು. ಆಗ ಅವರು ಮಹಾನ್ ಸಾಧಕರಾಗಿ ಬೆಳೆಯುತ್ತಾರೆ. ಮನಸ್ಸು ಹೇಳಿದಂತೆ ನಾವು ಕೇಳಿದರೆ ಬದುಕಿನ ದಾರಿಯನ್ನು ತಪ್ಪಿಸುತ್ತದೆ ಎಂದು ತಿಳಿಸಿದರು.

ಹೊಸದು ಕಂಡ ತಕ್ಷಣ ಮನಸ್ಸು ಬೇಕು ಬೇಕು ಎಂದು ಹಾತೊರೆಯುತ್ತದೆ. ಮನಸ್ಸು ಹೇಳಿದಂತೆ ಕೇಳಿದರೆ ಜೀವನ ನಡೆಸುವುದು ಕಷ್ಟವಾಗುತ್ತದೆ. ಆಗಾಗಿ ನಾವು ಇಂತಹ ಮನಸ್ಸನ್ನು ಗೆಲ್ಲಬೇಕು. ವೈರಿಗಳನ್ನು ಗೆಲ್ಲುವುದಕ್ಕಿಂತ ನಮ್ಮ ಮನಸ್ಸನ್ನು ಗೆದ್ದರೆ ನಾವೇ ಮಹಾತ್ಮರಾಗುತ್ತೇವೆ. ವೈರಿಗಳನ್ನು ಗೆದ್ದವನು ಶೂರನಾಗಬಹುದು, ಪರಾಕ್ರಮಿಯಾಗಬಹುದು, ಆದರೆ ನಿಜವಾದ ಪರಾಕ್ರಮಿ ಶೂರ ಯಾರು ಎಂದರೆ ತಮ್ಮ ಮನಸ್ಸನ್ನು ಗೆಲ್ಲುತ್ತಾನೋ ಅವರೆ. ಶೂರ, ಪರಾಕ್ರಮಿಗಳು ಶರಣರಾಗಿದ್ದಾರೆಂದರೆ 12 ನೇ ಶತಮಾನದ ಬಸವಣ್ಣನವರು ಹಾಗೂ ಶರಣ ಶರಣೇರಾಗಿದ್ದಾರೆ ಎಂದರು.

ನಾವು ಸಹ ಅಂತರ ಸಾಧಕರಾಗಬೇಕೆಂದರೆ ನಮ್ಮ ಮನಸ್ಸನ್ನು ನಾವು ಗೆಲ್ಲಬೇಕು. ಬೆಳಿಗ್ಗೆ ಎದ್ದು ಯೋಗ ಮಾಡಲು ಹೋಗಬೇಕೆಂದು ಮನಸ್ಸಿಗೆ ಹೇಳಿ ಮಲಗಿ ಬೇಗ ಎದ್ದು ತಯಾರಾಗಿ ಮನಸ್ಸು ಮಾಡಿ ಶಿವಯೋಗಕ್ಕೆ ಬಂದಿದ್ದೀರಾ ಆಗಾಗಿ ನೀವು ಸಾಧಕರೆ ಎಂದರು. ಚಂಚಲತೆ ಮತ್ತು ಚಪಲತೆಯನ್ನು ಕಳೆದುಕೊಳ್ಳುವ ಏಕಾಗ್ರತೆ ಬೇಕು, ಶಿವಯೋಗ ಮಾಡುವುದರಿಂದ ದೃಷ್ಟಿ ದ್ಯಾನ ಮಾಡುವುದರಿಂದ ಏಕಾಗ್ರತೆ ಸಿಗುತ್ತದೆ. ಯಾವುದೇ ಕೆಲಸ ಮಾಡಲಿ ಅಲ್ಲಿ ಏಕಾಗ್ರತೆ ಮುಖ್ಯ ಚಾಲಕನಿಗೆ ಏಕಾಗ್ರತೆ ಇಲ್ಲದೆ ಹೋದರೆ ಅಪಘಾತವಾಗುತ್ತದೆ. ಆಗೆಯೇ ಮನಸ್ಸಿನ ಏಕಾಗ್ರತೆಗೆ ಶಿವಯೋಗ ಮುಖ್ಯ, ಆಗಾಗಿ ಪ್ರತಿ ನಿತ್ಯ ಮನೆಯಲ್ಲಿ ಶಿವಯೋಗ ಮಾಡೋಣ ನಮ್ಮ ಮನಸ್ಸನ್ನು ಗೆದ್ದು ಮಹಾತ್ಮರಾಗೋಣ ಮನಸ್ಸನ್ನು ಶಿವಯೋಗದಲ್ಲಿ ಕಟ್ಟಿ ಹಾಕಲು ಲಿಂಗ ಕಟ್ಟಿಕೊಳ್ಳೋಣ ಎಂದು ಹೇಳುತ್ತಾ ವಿಭೂತಿ ಧಾರಣೆ ವಚನಾಭಿಷೇಕ ಭಾವಶುದ್ಧಿಯಿಂದ ಭಕ್ತಿ ಶುದ್ಧಿಯಿಂದ ಇಷ್ಟ ಲಿಂಗಕ್ಕೆ ಪೂಜಿಸಿ ವಿಶ್ವಕ್ಕೆ ಕಲ್ಯಾಣವಾಗಲಿ ಎಂದು ತಿಳಿಸಿದರು.

ಎಸ್‌ಜೆಎಂ ವಿದ್ಯಾಪೀಠದ ಸದಸ್ಯರಾದ ಡಾ.ಬಸವಕುಮಾರಸ್ವಾಮೀಜಿ,ಚನ್ನಗಿರಿಯ ಹಾಲಸ್ವಾಮಿ ವಿರಕ್ತ ಮಠದ ಡಾ. ಬಸವ ಜಯಚಂದ್ರ ಸ್ವಾಮಿಗಳು ಇರಕಲ್ ಶಿವಶಕ್ತಿ ಪೀಠದ ಬಸವ ಪ್ರಸಾದ ಸ್ವಾಮಿಗಳು, ನಿಪ್ಪಾಣಿಯ ಮುರುಘೇಂದ್ರ ಮಠದ ಶ್ರೀ ಬಸವ ಮಲ್ಲಕಾರ್ಜುನ ಸ್ವಾಮಿಗಳು, ನಿಡಸೋಸಿಯ ಶ್ರೀ ದುರುದುಂಡೇಶ್ವರ ಸಿದ್ಧ ಸಂಸ್ಥಾನದ ಶ್ರೀ ಜಗದ್ಗುರು ಪಂಚಮ ಶಿವಲಿಂಗೇಶ್ವರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T